ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡ ದಿನ ಪತ್ರಿಕೆ

KANNADA MATHRUBHOOMI
KANNADA DAILY PAPER

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

mathrubhoomircr@gmail.com
Call : 9886635117

ಸಂಪುಟ: Volume: 03 | ಸಂಚಿಕೆ : Issuse : 141 | ದಿನಾಂಕ : 22-03-2026 ರವಿವಾರ Date: 22-03-2026 Sunday | RNI: KARKAN/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ: pages : 04 | ರೂ: Rs. 2

## ಪೆಟ್ರೋಲ್ - ಡೀಸೆಲ್ ಬೆಲೆಯಲ್ಲಿ ಏರಿಕೆಯ ವದಂತಿ, ಬಸ್ ಟಿಕೆಟ್ ದರ ಹೆಚ್ಚಾಗುತ್ತಾ? ಸಚಿವ ರಾಮಲಿಂಗಾರೆಡ್ಡಿ

**ಬೆಂಗಳೂರು,ಮಾ.21-**ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಏರಿಕೆಯಾಗುವ ವದಂತಿ ಕೇಳಿಬರುತ್ತಿರುತ್ತದೆ. ಈ ನಡುವೆ ರಾಜ್ಯದಲ್ಲಿ ಬಸ್ ಟಿಕೆಟ್ ದರವನ್ನು ಹೆಚ್ಚಿಸುವುದಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ರಾಜ್ಯ ಸರ್ಕಾರ ಪ್ರಯಾಣ ದರ ಹೆಚ್ಚಿಸುವ ಮೂಲಕ ಜನರಿಗೆ ಹೊರೆಯಾಗಲ್ಲ. ದರ ಪರಿಷ್ಕರಣೆಯಂತಹ ಯಾವುದೇ ಪ್ರಕ್ರಿಯೆಯನ್ನು ಕೈಗೊಂಡಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಡೀಸೆಲ್ ದರ ಏರಿಕೆಯಾಗುವ ಸಾಧ್ಯತೆ ಇದೆ ಎಂಬ ಕಾರಣಕ್ಕೆ ನಾವು ಟಿಕೆಟ್ ದರವನ್ನು ಹೆಚ್ಚಿಸುವುದಿಲ್ಲ. ಈಗ ದರ ಹೆಚ್ಚಳ ಮಾಡುವ ಅಧಿಕಾರ ನಮಗಿಲ್ಲ, ನಾವು ಹೆಚ್ಚಿಸುತ್ತಿಲ್ಲ ಎಂದು ತಿಳಿಸಿದರು.

ಪ್ರಯಾಣ ದರ ಪರಿಷ್ಕರಣೆಗಾಗಿ ಸಮಿತಿ ರಚಿಸಲಾಗುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಸ್ತುತ ಅಂತಹ ಯಾವುದೇ ಕ್ರಮವನ್ನು ಸರ್ಕಾರ ಪರಿಗಣಿಸುತ್ತಿಲ್ಲ 4ನೇ ಪುಟಕ್ಕೆ...

## ಬೆಳಗಾವಿ: ದಾರಿ ವಿವಾದಕ್ಕೆ ಸಂಬಂಧಿಕನಿಂದಲೇ ಕೊಲೆ; ಆರೋಪಿ ಬಂಧನ

**ಬೆಳಗಾವಿ,ಮಾ.21-**ಕ್ಷುಲ್ಲಕ ದಾರಿ ವಿಚಾರವಾಗಿ ನಡೆದ ಸಣ್ಣ ಗಲಾಟೆಯಲ್ಲಿ ಸಂಬಂಧಿಯನ್ನು ಕೊಂದ ಆರೋಪದ ಮೇಲೆ 36 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಮೃತರನ್ನು ದೊಡವಾಡದ ಕೊಪ್ಪ ಅಗಸಿ ನಿವಾಸಿ ಮಹೇಶ ಬಸಯ್ಯ ಉಪ್ಪಿನಮಠ ಎಂದು ಗುರುತಿಸಲಾಗಿದ್ದು, ಆರೋಪಿ ರುದ್ರಯ್ಯ ಬಸಯ್ಯ ಉಪ್ಪಿನಮಠ ಎಂಬಾತನನ್ನು ವಶಕ್ಕೆ ಪಡೆಯಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಬೈಲಹೊಂಗಲ ತಾಲೂಕಿನ ದೊಡವಾಡ ಗ್ರಾಮದಲ್ಲಿ ಕೊಲೆ ನಡೆದಿದೆ.

ಆರೋಪಿ ಮೊದಲಿನಿಂದಲೂ ದಾರಿ ವಿಚಾರವಾಗಿ ಮೃತನೊಂದಿಗೆ ಜಗಳವಾಡುತ್ತಿದ್ದ

ಎನ್ನಲಾಗಿದೆ. ಮಾರ್ಚ್ 17 ರಂದು ಸಂಜೆ ಕೋಳಿ ಅಂಗಡಿಯೊಂದರ ಬಳಿ ನಡೆದ ಗಲಾಟೆ ವೇಳೆ ಕುಡುಗೋಲಿನಿಂದ

ಮಹೇಶನ ಕುತ್ತಿಗೆಗೆ ಆರೋಪಿ ಇರಿದು ಸ್ಥಳದಿಂದ ಪರಾರಿಯಾಗಿದ್ದಾನೆ.

ಬಳಿಕ ಕ್ಷಿಪ್ರಗತಿಯಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸರು ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

# ಶ್ರದ್ಧಾಭಕ್ತಿಯಿಂದ ಈದ್ ಉಲ್ ಫಿತರ್ ಆಚರಣೆ ಸಾಮೂಹಿಕ ಪ್ರಾರ್ಥನೆ





■ ಕನ್ನಡ ಮಾತೃ ಭೂಮಿ ವರ್ತೆ

**ರಾಯಚೂರು,ಮಾ.21-**ಪವಿತ್ರ ರಂಜಾನ ಹಬ್ಬದಂಗವಾಗಿ ಮುಸ್ಲಿಂ ಬಾಂಧವರು ವಿವಿಧ ಮಸೀದಿಗಲ್ಲಿ ಪ್ರಾರ್ಥನೆ ಸಲ್ಲಿಸಿ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ತಿಂಗಳ ಪೂರ್ತಿ ಉಪವಾಸ ವ್ರತ ಆಚರಿಸಿ ಚಂದ್ರನ ದರ್ಶನದ ನಂತರ ಉಪವಾಸ ವ್ರತ ಮುಕ್ತಾಯಗೊಳಿಸಿದರು.

ಬಡವರ ಹಸಿವು ಮತ್ತು ದಾನ ಧರ್ಮ ಮಹತ್ವ ಸಾರುವ ಈದ್ ಉಲ್ ಫಿತರ್ ಆಚರಣೆ ಮುಸ್ಲಿಂ ಬಾಂಧವರ ಮಹತ್ವ ಹಬ್ಬವಾಗಿದೆ. 30 ದಿನದವರೆಗೆ ಉಪವಾಸ ಆಚರಿಸಿ ನಮಾಜ್ ಸಲ್ಲಿಸುವ ಮೂಲಕ ಮುಕ್ತಾಯಗೊಳಿಸಲಾಗುತ್ತದೆ. ಬೆಳಿಗಿನಿಂದಲೇ ಪ್ರತ್ಯೇಕ ನಮಾಜ್‌ಗಳನ್ನು ನಡೆಸಿ ಸಾಮೂಹಿಕ ಪ್ರಾರ್ಥನೆಯಲ್ಲಿ ಜನರು ಭಾಗಿಯಾದರು.

ನಗರದ ಎರಡು ಪ್ರತ್ಯೇಕ ಈದ್ಗಾದಲ್ಲಿ ಸಾವಿರಾರು ಜನರು ಭಾಗಿಯಾಗಿ ಎಲ್ಲರ ಸುಖ,ಶಾಂತಿ, ನೆಮ್ಮದಿಗೆ ಸಾಮೂಹಿತ ಪ್ರಾರ್ಥನೆ ಸಲ್ಲಿಸದರು.ನಂತರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಳ್ಳಲಾಯಿತು. ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜ, ಸಂಸದ ಜಿ.ಕುಮಾರನಾಯಕ, ಕೆ.ಶಾಂತಪ್ಪ, ಜಯವಂತರಾವ್ ಪತಂಗೆ, ಜಿ.ಶಿವಮೂರ್ತಿ, ರುದ್ರಪ್ಪ ಅಂಗಡಿ, ಅಮರೇಗೌಡ ಹಂಚಿನಾಳ, ಮಹ್ಮದಶಾಲಂ ಸೇರಿ ಅನೇಕರು ಭಾಗವಹಿಸಿದ್ದರು.

## ಯಾವುದೇ ಧರ್ಮವೂ ದ್ವೇಷ ಬೋಧಿಸುವುದಿಲ್ಲ ಪ್ರೀತಿಯನ್ನು ಬೋಧಿಸುತ್ತವೆ-ಸಿಎಂ ಸಿದ್ದರಾಮಯ್ಯ

**ಬೆಂಗಳೂರು,ಮಾ.21-**ಯಾವುದೇ ಧರ್ಮವೂ ದ್ವೇಷವನ್ನು ಬೋಧಿಸುವುದಿಲ್ಲ. ಎಲ್ಲ ಧರ್ಮಗಳೂ ಪ್ರೀತಿಯನ್ನು ಬೋಧಿಸುತ್ತವೆ. ಇದನ್ನು ಅರಿತು ಬಾಳಿದರೆ ಸಮಾಜದಲ್ಲಿ ಶಾಂತಿ-ಸೌಹಾರ್ದತೆ ನೆಲೆಸಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಹೇಳಿದ್ದಾರೆ.

ಪವಿತ್ರ ರಂಜಾನ್ ಹಬ್ಬದ ಪ್ರಯುಕ್ತ ಬೆಂಗಳೂರಿನ ಮಿಲ್ಲರ್ಸ್ ರಸ್ತೆಯ ಮಸ್ಜಿದ್-ಈ-ಖಾದ್ರಿಯಾದಲ್ಲಿ ನಡೆದ ಸಾಮೂ ಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ ಮುಖ್ಯಮಂತ್ರಿಗಳು, ರಾಜ್ಯದ 4ನೇ ಪುಟಕ್ಕೆ...



## ಅರಕೇರಾ ಗ್ರಾಮದ ಬಳಿ ಚಿರತೆ ಕಾಟ ಕರು ಹೊತ್ತುಯ್ದು ಆತಂಕ

■ ಕನ್ನಡ ಮಾತೃ ಭೂಮಿ ವರ್ತೆ



**ರಾಯಚೂರು,ಮಾ.21-**ಅರಕೇರಾ ತಾಲೂಕು ಸುತ್ತಮುತ್ತಲಿನ ಗ್ರಾಮಗಳಲ್ಲಿ ಚಿರತೆ ಹಾವಳಿ ಹೆಚ್ಚಾಗಿದ್ದು, ಅದರಲ್ಲೂ ಅರಕೇರಾ ಪಟ್ಟಣದಲ್ಲಿನ ಟಿಪ್ಪು ಸುಲ್ತಾನ್ ವೃತ್ತದ ಹತ್ತಿರದ ಸಿದ್ದಮ್ಮ ಜಾಟಗಲ್ ಇವರ ಮನೆ ಹಿಂದೆ ಗಿಡಕ್ಕೆ ಕಟ್ಟಿದ ಆಕಳು ಕರವನ್ನು ಬೆಳಗಿನ ಜಾವ 4ಗಂಟೆಗೆ ಚಿರತೆ ಬಂದು ಕರುವಿನ ಮೇಲೆ ದಾಳಿ ಕೊಂದು ಹಾಕಿದ ಘಟನೆ ಜರುಗಿದೆ.

ಅರಕೇರಾ ದೇವದುರ್ಗ ಮುಖ್ಯ ರಸ್ತೆ ಪಕ್ಕದಲ್ಲಿರುವ ಇವರ ಮನೆಯಲ್ಲಿ ಕಟ್ಟಿ ಹಾಕಿದ ಕರವನ್ನು ತಿನ್ನಲು ಬಂದಾಗ ಸಿದ್ದಮ್ಮ ಜಾಗಟಗಲ್ ಇವರ ಆಕಳ ಕರ ಒದ್ದಾಡುತ್ತಿರುವ ಶಬ್ದವನ್ನು ಮನೆಯಿಂದಲೇ ನೋಡಿದ್ದಾಳೆ ಆಗ ಜೋರಾಗಿ ಕೂಗುತ್ತ ಮನೆಯೋಳಗೆ ಹೋಗಿದ್ದಾಳೆ. ಚಿರತೆಯು ಕರವನ್ನು ತಿನ್ನುವುದನ್ನು ನೋಡಿ ಕೂಗುತ್ತಾ ಮನೆಯೋಳಗೆ ಹೋಗಿದ್ದಾಳೆ..ಅಕ್ಕ ಪಕ್ಕದ ಜನರು ಕೂಗಿದ ಶಬ್ದ ಕೇಳಿ ಮನೆ ಕಡೆ ಬಂದಿದ್ದಾರೆ. ಜನರು ಬಂದು ಚಿರತೆಯು ಕರವನ್ನು ತಿಂದು ಹೊಗಿದ್ದನ್ನು ಪಟ್ಟಣದಲ್ಲಿನ ಜನರು ಗುಂಪು ಗುಂಪಾಗಿ ಬಂದು ನೋಡುತ್ತಿದ್ದಾರೆ.

ಇನ್ನು ಪಕ್ಕದಲ್ಲೆ ಎರಡು ಮೂರು ಆಕಳನ್ನು ಕಟ್ಟಿ ಹಾಕಿದ್ದಾರೆ. ಅದೃಷ್ಟವಶಾತ್ ಅವುಗಳಿಗೆ ಯಾವುದೇ ತೊಂದರೆಯಾಗಿಲಗಲ. ಕರು ತಿನ್ನಲು ಬಂದ ಸ್ಥಳದಲ್ಲಿ ಚಿರತೆ ಹೆಜ್ಜೆ ಗುರುತು ನೋಡಿ ಜನರಲ್ಲಿ 4ನೇ ಪುಟಕ್ಕೆ...

## ಎರಡು ಪ್ರತ್ಯೇಕ ಘಟನೆ: ಹೋಳಿಯಾಡಿ ಸ್ನಾನಕ್ಕೆ ಹೋದ ಇಬ್ಬರು ಯುವಕರು ನೀರು ಪಾಲು

■ ಕನ್ನಡ ಮಾತೃ ಭೂಮಿ ವರ್ತೆ

**ರಾಯಚೂರು,ಮಾ.21-**ಎರಡು ಪ್ರತ್ಯೇಕ ಘಟನೆಗಳಲ್ಲಿ ಯುಗಾದಿ ಹಬ್ಬದಂಗವಾಗಿ ಹೋಳಿ ಆಟವಾಡಿ ಸ್ನಾನಕ್ಕೆಂದು ನೀರಿನಲ್ಲಿ ಮುಳುಗಿ ಇಬ್ಬರು ಯುವಕರು ಸಾವಿಗೀಡಾದ ಘಟನೆ ಜಿಲ್ಲೆಯಲ್ಲಿ ವರದಿಯಾಗಿದೆ. ಮಾನವಿ ತಾಲೂಕಿನ ಗೋವಿನದೊಡ್ಡಿ ಗ್ರಾಮದಲ್ಲಿ ಶುಕ್ರವಾರ ಹೋಳಿ ಆಟವಾಡಿ ಸ್ನಾನಕ್ಕೆಂದು ಹೋದ ಗೋವಿಂದರಾಜ ಎಂಬಾತ ಕೆರೆಯಲ್ಲಿ ಮುಳುಗಿ ಸಾವೀಗೀಡಾಗಿದ್ದಾನೆ.ಮತ್ತೊಂದು ಘಟನೆ ದೇವದುರ್ಗ ತಾಲೂಕಿನ ಬುದ್ದಿನ್ನಿ ಗ್ರಾಮದ ಯುವಕನೋರ್ವ ಕಾಲುವೆಯಲ್ಲಿ ಮುಳುಗಿ ಸಾವಿಗೀಡಾಗಿದ್ದಾನೆ. ಗಂಗಾಧರ ಎಂಬ ಯುವಕ ಬಣ್ಣವಾಡಿ ಕಾಲುವೆ ನೀರಿಳಿದಾಗ ಕೊಚ್ಚಿ ಹೋಗಿದ್ದಾನೆ. ನಾಗೋಲಿ ಗ್ರಾಮದ ಬಳಿ ಯುವಕ ಶವ ಪತ್ತೆಯಾಗಿದೆ. ಗಬ್ಬೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.





## 23 ರಂದು ದೇವರ ದಾಸಿಮಯ್ಯ ಜಯಂತಿ ಭಾವಚಿತ್ರ ಮೆರವಣಿಗೆ- ನಾಗರಾಜ



■ ಕನ್ನಡ ಮಾತೃ ಭೂಮಿ ವರ್ತೆ

**ರಾಯಚೂರು,ಮಾ.21-**ಆದ್ಯ ವಚನಕಾರ ದೇವರ ದಾಸಿಮಯ್ಯ ಜಯಂತಿಯನ್ನು ಮಾ.23 ರಂದು ಜಿಲ್ಲಾಡಳಿತದ ಸಹಯೋಗದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ನೇಕಾರ ಸಮುದಾಯಗಳ ಒಕ್ಕೂಟ ಅಧ್ಯಕ್ಷ ಜಿ.ನಾಗರಾಜಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಅಂದು ಬೆಳಿಗ್ಗೆ 9ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ ವೃತ್ತದಿಂದ ದೇವರ ದಾಸಿಮಯ್ಯ ಭಾವಚಿತ್ರದ ಮೆರವಣಿಗೆ ನಡೆಯಲಿದೆ . ಮೆರವಣಿಗೆಯನ್ನು ಜಿಲ್ಲಾಧಿಕಾರಿಗಳು ಚಾಲನೆ ನೀಡಲಿದ್ದಾರೆ..ನಂತರ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯುತ್ತದೆ. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರು, ವಿಧಾನ ಪರಿಷತ್ ಸದಸ್ಯರುಗಳು ಭಾಗವಹಿಸುತ್ತಾರೆ. ಡಾ. ರಮೇಶ ಯಾಳಗಿಯವರು ದೇವರ ದಾಸಿಮಯ್ಯ ಕುರಿತು ಉಪನ್ಯಾಸ ನೀಡಲಿದ್ದಾರೆ. ಸಮುದಾಯ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ನೇಕಾರ ಒಕ್ಕೂಟದ ನಿರ್ದೇಶಕ ದೊಡ್ಡ ಈರಣ್ಣ ಕರ್ಲಿ, ವೆಂಕಟೇಶ, ದತ್ತಾತ್ರೇಯ ವಲ್ಕಂದಿನ್ನಿ, ಉದಯಕುಮಾರ, ಸಂಜಯ, ವೀರೇಶ, ಶ್ರೀನಿವಾಸ ಉಪಸ್ಥಿತರಿದ್ದರು.

## ಸಿದ್ದಗಂಗಾ ಮಠದ 10,000 ಮಕ್ಕಳೊಂದಿಗೆ ಸಂವಾದ ನಡೆಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು: ಸಚಿವ ವಿ. ಸೋಮಣ್ಣ

**ತುಮಕೂರು,ಮಾ.21-**ಎಪ್ರಿಲ್ 1ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಿದ್ದಗಂಗಾ ಮಠದ 10,000 ಮಕ್ಕಳೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಶನಿವಾರ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಾರ್ಚ್ 31ರಂದು ಬೆಂಗಳೂರಿನ ಹೆಚ್ಎಎಲ್ ವಿಮಾನ ನಿಲ್ದಾಣಕ್ಕೆ ಬಂದಿಳಿಯಲಿದ್ದಾರೆ. ನಂತರ ಬೆಂಗಳೂರಿನ ಲೋಕ್‌ಪಾಲ್ ಭವನದಲ್ಲಿ ತಂಗಲಿದ್ದಾರೆ. ಎಪ್ರಿಲ್ 1ರಂದು ಬೆಳಗ್ಗೆ ಒಂಬತ್ತು ಗಂಟೆಗೆ ತುಮಕೂರಿನ ಸಿದ್ದಗಂಗಾ ಮಠಕ್ಕೆ ಆಗಮಿಸಲಿದ್ದಾರೆ. ನಂತರ ಸಿದ್ದಗಂಗಾ ಮಠದಲ್ಲಿನ ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆ ದರ್ಶನ ಪಡೆಯಲಿದ್ದಾರೆ. ಬಳಿಕ ಮಠದ 10,000 ಮಕ್ಕಳೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಹೇಳಿದರು.

ಬಳಿಕ ಶ್ರೀ ಶಿವಕುಮಾರ ಸ್ವಾಮೀಜಿಯವರ ಜನ್ಮದಿನಾಚರಣೆ ಕಾರ್ಯಕ್ರಮದ ವೇದಿಕೆಯಲ್ಲಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ ಪರಮೇಶ್ವ ಅಧ್ಯಕ್ಷತೆ ವಹಿಸಲಿದ್ದಾರೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಚಿವರಾದ ಎಂಬಿ ಪಾಟೀಲ್ ಸೇರಿದಂತೆ ಸ್ಥಳೀಯ 4ನೇ ಪುಟಕ್ಕೆ...



## ಕುರ್ವಕಲಾ ಗ್ರಾಮಕ್ಕೆ ಶಾಸಕರಾದ ಬಸನಗೌಡ ದದ್ದಲ್ ಭೇಟಿ : ಸೇತುವೆ ಕಾಮಗಾರಿ ಪರಿಶೀಲನೆ



■ ಕನ್ನಡ ಮಾತೃ ಭೂಮಿ ವರ್ತೆ

**ರಾಯಚೂರು,ಮಾ.20-**ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಮಾರ್ಚ 20ರಂದು ರಾಯಚೂರು ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡು ರಾಯಚೂರು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ನೇತೃತ್ವದಲ್ಲಿ ಕುರ್ವಕಲಾ ಗ್ರಾಮಕ್ಕೆ ಭೇಟಿ ನೀಡಿ, ಸೇತುವೆ ಕಾಮಗಾರಿಯ ವೀಕ್ಷಣೆ ನಡೆಸಿದರು.

ಭೇಟಿ ಸಂದರ್ಭದಲ್ಲಿ ಶಾಸಕರು, ದೇವಸ್ಥಾನ ಸುತ್ತಲು ಸಂಚರಿಸಿ ವೀಕ್ಷಣೆ ನಡೆಸಿ, ರಸ್ತೆಗಳು, ಕುಡಿಯುವ ನೀರು, ಸಮುದಾಯ ಭವನ, ಕಲ್ಯಾಣ ಮಂಟಪ ಹಾಗೂ ಹಲವಾರು ಅಭಿವೃದ್ಧಿ ಕಾಮಗಾರಿಗಳ ನೀಲಿ ನಕ್ಷೆ ತಯಾರಿಸಲು ಅಧಿಕಾರಿಗಳಿ ಸೂಚನೆ ನೀಡಿದರು.

ರಾಯಚೂರು ಸೇರಿದಂತೆ 4ನೇ ಪುಟಕ್ಕೆ...

# ಬೆಳಗಾವಿಯಲ್ಲಿ ಸಂಭ್ರಮದ ಈದ್

## ಮುಸ್ಲಿಂ ಬಾಂಧವರಿಂದ ಸಾಮೂಹಿಕ ಪ್ರಾರ್ಥನೆ



**ಬೆಳಗಾವಿ,ಮಾ.21-**ಬೆಳಗಾವಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಶನಿವಾರ ಈದ್ ಉಲ್ ಫಿತ್ರ್ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಮಕ್ಕಳು, ಮಹಿಳೆಯರು, ಹಿರಿಯರು ಸೇರಿದಂತೆ ಎಲ್ಲ ಮುಸ್ಲಿಂ ಬಾಂಧವರು ಹಬ್ಬದ ಸಂಭ್ರಮದಲ್ಲಿ ಮಿಂದೆದ್ದರು. ಬೆಳಗ್ಗೆಯೇ ಹೊಸ ಬಟ್ಟೆಗಳನ್ನು ಧರಿಸಿ, ಅತ್ತರ್‌ನ ಘಮಲಿನೊಂದಿಗೆ ಈದ್ಗಾ ಮೈದಾನಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಯುಗಾದಿ ಹಬ್ಬವನ್ನು ಸಡಗರದಿಂದ ಆಚರಿಸಿದ್ದ ಗಡಿ ಜಿಲ್ಲೆ ಮಾರನೇ ದಿನವೇ ಈದ್ ಸಂಭ್ರಮಕ್ಕೆ ಸಾಕ್ಷಿಯಾಯಿತು. ಮುಸ್ಲಿಂ ಸಮುದಾಯದವರು ಯುಗಾದಿ ಹಬ್ಬದ ಶುಭಾಶಯ ಕೋರಿದರೆ, ಹಿಂದೂಗಳು ಈದ್‌ನ ಶುಭ ಕಾಮನೆ ತಿಳಿಸಿದರು. ಪರಸ್ಪರ ಕೈ ಕುಲುಕಿ, ಅಪ್ಪಿಕೊಂಡು ಭಾವೈಕ್ಯತೆ ಸಂದೇಶ ಸಾರಿದರು. ಒಂದು ತಿಂಗಳ ಕಾಲ ಉಪವಾಸ ವ್ರತ ಮಾಡಿದ ಹಲವು ಮಕ್ಕಳು ಕೂಡ ಶುಭ್ರವಾದ ಬಿಳಿ ಜುಬ್ಬಾ, ಟೋಪಿಗಳನ್ನು ಧರಿಸಿ ಎಲ್ಲರನ್ನು ಆಕರ್ಷಿಸಿದರು.

ಬೆಳಗಾವಿ ನಗರದಲ್ಲಿರುವ ಜಿಲ್ಲಾ ನ್ಯಾಯಾಲಯ ಬಳಿಯ ಈದ್ಗಾ ಮೈದಾನ, ಕೋಟೆ ಆವರಣದಲ್ಲಿರುವ ಪುರಾತನ ಕಾಲದ ಮಸೀದಿಯಲ್ಲಿ ಅಪಾರ ಸಂಖ್ಯೆಯ ಮುಸ್ಲಿಂ ಬಾಂಧವರು ಪ್ರಾರ್ಥನೆ ಸಲ್ಲಿಸಿದರು.

ಹಬ್ಬದ ಕಾರಣಕ್ಕಾಗಿ ಕಳೆದು ಒಂದು ತಿಂಗಳಿಂದ ನಗರದ ಮಾರುಕಟ್ಟೆಗಳಲ್ಲಿ ಭರ್ಜರಿ ವ್ಯಾಪಾರ ವಹಿವಾಟು ನಡೆಯಿತು. ಹೊಸ ಬಟ್ಟೆಗಳ ಖರೀದಿ, ತಿನಿಸುಗಳ ಖರೀದಿ, ಮದರಂಗಿ ಕೋನ್‌ಗಳ ಖರೀದಿ, ಮುಸ್ಲಿಮರು ಧರಿಸುವ ಟೊಪ್ಪಿಗೆಗಳ ಮಾರಾಟವೂ ಜೋರಾಗಿತ್ತು. ಕೊನೆಯ ದಿನ ಹಬ್ಬದ ಸಂಭ್ರಮ ಇಮ್ಮಡಿಗೊಂಡಿತ್ತು. ಮಸೀದಿ, ದರ್ಗಾ ಹಾಗೂ ಮುಸ್ಲಿಮರ ಮನೆಗಳಲ್ಲಿ ಇಡೀ ದಿನ ಊಟೋಪಚಾರ, ಆತಿಥ್ಯ ನಡೆಯಿತು.

ಒಂದು ತಿಂಗಳು ಶ್ರದ್ಧಾಭಕ್ತಿಯಿಂದ ರೋಜಾ ಕೈಗೊಂಡಿದ್ದ ಮುಸ್ಲಿಮರು, ಇಂದು ಬೆಳಗ್ಗೆ ಸಾಮೂಹಿಕವಾಗಿ ಪ್ರಾರ್ಥನೆ ಮಾಡಿ ಪರಸ್ಪರ ಶುಭಾಶಯ ಕೋರಿದರು. ಇಲ್ಲಿನ ನ್ಯಾಯಾಲಯ ಬಳಿ ಇರುವ ಈದ್ಗಾ ಮೈದಾನ, ವಡಗಾವಿಯ ಈದ್ಗಾ ಮೈದಾನ, ಕೋಟೆ ಆವರಣದಲ್ಲಿನ ಮಸೀದಿ ಹಾಗೂ ಬೆಳಗಾವಿ ನಗರದ ಎಲ್ಲ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಯಶಸ್ವಿಯಾಗಿ ಜರುಗಿತು.

ಶಾಸಕ ಆಸಿಫ್ ಸೇಠ್ ಸೇರಿದಂತೆ ಹಲವು ಗಣ್ಯರು, ವಿವಿಧ ಧರ್ಮಗಳ ಮುಖಂಡರು ಪಾಲ್ಗೊಂಡಿದ್ದರು. ನಗರದಾದ್ಯಂತ ಪೊಲೀಸರು ಬಿಗಿ ಪೊಲೀಸ್ ಭದ್ರತೆ ನಿಯೋಜಿಸಲಾಗಿತ್ತು.

# ತುಮಕೂರು: ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಆತ್ಮಹತ್ಯೆ: ಪ್ರಕರಣ ದಾಖಲು, ತನಿಖೆ ಶುರು

**ತುಮಕೂರು,ಮಾ.21-**ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರೊಬ್ಬರು ಕಚೇರಿಯಲ್ಲೇ ಆತ್ಮಹತ್ಯೆಗೆ ಶರಣಾದ ಘಟನೆ ಜಿಲ್ಲೆಯ ಪಾವಗಡ ಪಟ್ಟಣದಲ್ಲಿ ನಡೆದಿದೆ. ಪಾವಗಡದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಆತ್ಮಹತ್ಯೆಗೆ ಶರಣಾದವರು. ಮಲ್ಲಿಕಾರ್ಜುನ್ ಪಾವಗಡದ ಗುಂಡಾರ್ಲಹಳ್ಳಿಯ ಮೂಲದವರು ಎಂದು ತಿಳಿದು ಬಂದಿದೆ.

ಪಾವಗಡದಲ್ಲಿರುವ ಸಮಾಜ ಕಲ್ಯಾಣ ಇಲಾಖೆ ಕಚೇರಿಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದು, ಸಾವಿಗೂ ಮುನ್ನ ಸೆಲ್ಫಿ ವಿಡಿಯೋ ಮಾಡಿದ್ದಾರೆ. ಮೂಲತಃ ಪಾವಗಡ ತಾಲೂಕಿನ ಗುಂಡರ್ಲಾಹಳ್ಳಿಯವರಾದ ಮಲ್ಲಿಕಾರ್ಜುನ್, ಸಮಾಜ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು.

ಕಿರುಕುಳದಿಂದ ಈ ನಿರ್ಧಾರ: ಮಲ್ಲಿಕಾರ್ಜುನ್ ಆತ್ಮಹತ್ಯೆಗೆ ಮುನ್ನ ವಿಡಿಯೋ ಮಾಡಿದ್ದು, ತಮ್ಮ ಸಾವಿಗೆ ಮೇಲಧಿಕಾರಿ ಕಾರಣ ಎಂದು ಆರೋಪಿಸಿದ್ದಾರೆ. ನನ್ನ ತಾಯಿ, ಪತ್ನಿ ಮತ್ತು ಮಕ್ಕಳು ನನ್ನನ್ನು ಚೆನ್ನಾಗಿ ನೋಡಿಕೊಂಡಿದ್ದಾರೆ. ನನಗೆ ಒಳ್ಳೆಯ ಬೆಲೆ ನೀಡಿದ್ದಾರೆ. ನಾನು ಕೂಡ ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕಿತ್ತು. ಸಹಾಯ ಮಾಡಬೇಕಿತ್ತು. ಆದರೆ, ಸಹಾಯ ಮಾಡಲಾಗುತ್ತಿಲ್ಲ. ಮೇಲಧಿಕಾರಿ ನೀಡಿದ ಕಿರುಕುಳದಿಂದ ಈ ನಿರ್ಧಾರಕ್ಕೆ ಬಂದಿದ್ದೇನೆ. ನನ್ನ ಕುಟುಂಬ ಅವರ ಮೇಲೆ ಯಾವುದೇ ಸೇಡು ತೀರಿಸಿಕೊಳ್ಳುವ ಅವಶ್ಯಕತೆ ಇಲ್ಲ. ಅವರಿಗೆ ದೇವರು ಹಾಗೂ ಕಾನೂನು ಶಿಕ್ಷೆ ನೀಡಲಿದೆ ಎಂದು ವಿಡಿಯೋದಲ್ಲಿ ತಿಳಿಸಿದ್ದಾರೆ.



ನೋವು ತೋಡಿಕೊಂಡ ಪೋಷಕರು: ಮಗನ ಸಾವಿನ ಬಗ್ಗೆ ತಾಯಿ ಕೆಂಚಮ್ಮ ಮಾತನಾಡಿದ್ದಾರೆ. ಮಲ್ಲಿಕಾರ್ಜುನ್ ನನ್ನ ಎರಡನೇ ಮಗ. ನನಗೆ ಐದು ಮಕ್ಕಳು. ಊಟಕ್ಕೆ ಬರುವಂತೆ ಫೋನ್ ಮಾಡಿ ಮಾಡಿ ಸಾಕಾಯ್ತು. ಎಷ್ಟು ಬಾರಿ ಫೋನ್ ಮಾಡಿದರೂ ಕರೆ ಸ್ವೀಕರಿಸಲಿಲ್ಲ. ಅನುಮಾನ ಬಂದು ಸಂಬಂಧಿಕರುಗಳಿಗೆ, ಅವರಿವರಿಗೆ ಫೋನ್ ಮಾಡಿ ಕೇಳಿದೆವು. ಎಲ್ಲರೂ ನೋಡಿಲ್ಲ, ಇಲ್ಲಿಗೆ ಅವರು ಬಂದಿಲ್ಲ ಎಂದೇ ಹೇಳಿದರು. ಕೊನೆಗೆ ಕಚೇರಿಯಲ್ಲಿ ಹುಡುಕಲು ತೆರಳಿದೆವು. ಅಲ್ಲಿ ನೋಡಿದಾಗ ಬಾಗಿಲು ಹಾಕಿಕೊಂಡಿತ್ತು ಎಂದು ನೋವು ತೋಡಿಕೊಂಡಿದ್ದಾರೆ.

ದೂರು ಸಲ್ಲಿಸಿದ ಮಲ್ಲಿಕಾರ್ಜುನ ಕುಟುಂಬಸ್ಥರು: ಮಲ್ಲಿಕಾರ್ಜುನ್ ಅವರ ಕುಟುಂಬ ಸಲ್ಲಿಸಿದ ದೂರು ಮತ್ತು ಸೆಲ್ಫಿ ವಿಡಿಯೋ ಆಧಾರದ ಮೇಲೆ, ಜಂಟಿ ನಿರ್ದೇಶಕರ ವಿರುದ್ಧ ಭಾರತೀಯ ನ್ಯಾಯ ಸಂಹಿತಾದ ಸೆಕ್ಷನ್ 108 ರ ಅಡಿಯಲ್ಲಿ ಆತ್ಮಹತ್ಯೆಗೆ ಪ್ರಚೋದನೆಯ ಪ್ರಕರಣವನ್ನು ದಾಖಲಿಸಲಾಗಿದೆ ಮತ್ತು ಈ ವಿಷಯ ತನಿಖೆಯಲ್ಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಾಥಮಿಕ ಸಂಶೋಧನೆಗಳನ್ನು ಉಲ್ಲೇಖಿಸಿ, ಜಂಟಿ ನಿರ್ದೇಶಕರು ಇತ್ತೀಚೆಗೆ ಮೃತರ ವಿರುದ್ಧ ತನಿಖೆಯನ್ನು ಪ್ರಾರಂಭಿಸಿದ್ದಾರೆ. ಮಲ್ಲಿಕಾರ್ಜುನ್ ವಿರುದ್ಧ ದೂರುಗಳು ಬಂದ ಹಿನ್ನೆಲೆಯಲ್ಲಿ ತನಿಖೆಗೆ ಆದೇಶ ನೀಡಿರುವ ಪ್ರತಿ ಮಾಧ್ಯಮಗಳಿಗೆ ಲಭ್ಯವಾಗಿದೆ. ಅವರು ಕೇವಲ 10 ದಿನಗಳಲ್ಲಿ ನಿವೃತ್ತರಾಗಬೇಕಿತ್ತು ಎಂದು ಅಧಿಕಾರಿ ಹೇಳಿದ್ದಾರೆ. (ಈಟಿವಿ ಭಾರತ, ಪಿಟಿಐ)

ಆತ್ಮಹತ್ಯೆ ಪರಿಹಾರವಲ್ಲ: ನಿಮಗೆ ಆತ್ಮಹತ್ಯಾ ಆಲೋಚನೆಗಳು ಬರುತ್ತಿದ್ದರೆ ಅಥವಾ ನೀವು ಸ್ನೇಹಿತರ ಬಗ್ಗೆ ಚಿಂತಿತರಾಗಿದ್ದರೆ, ಇಲ್ಲವೇ ನಿಮಗೆ ಭಾವನಾತ್ಮಕ ಬೆಂಬಲದ ಅಗತ್ಯವಿದ್ದರೆ, ಸಲಹೆ ನೀಡಲು ಯಾವಾಗಲೂ, ಯಾರಾದರೂ ಇದ್ದೇ ಇರುತ್ತಾರೆ. ಸ್ನೇಹ ಫೌಂಡೇಶನ್ - 04424640050 (247 ಲಭ್ಯವಿದೆ) ಅಥವಾ ಟಾಟಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್ ಸಹಾಯವಾಣಿ ಐಕಾಲ್ ನಂಬರ್ 9152987821 (ಸೋಮವಾರದಿಂದ ಶನಿವಾರದವರೆಗೆ ಬೆಳಗ್ಗೆ 8ರಿಂದ ರಾತ್ರಿ 10ರವರೆಗೆ ಲಭ್ಯವಿದೆ) ಕರೆ ಮಾಡಬಹುದು.

# ಮೇ ಅಂತ್ಯಕ್ಕೆ ತುಂಗಭದ್ರಾ ಡ್ಯಾಂ 23 ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣ: ಸಚಿವ ಎನ್.ಎಸ್.ಬೋಸರಾಜು



**ವಿಜಯನಗರ,ಮಾ.21-**ಈಗಾಗಲೇ 18 ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣಗೊಂಡಿದ್ದು, 5 ಗೇಟ್‌ಗಳ ಅಳವಡಿಕೆ ಕಾರ್ಯ ಪ್ರಗತಿಯಲ್ಲಿದೆ. ಮಾರ್ಚ್ ಅಂತ್ಯದ ವೇಳೆಗೆ ಒಟ್ಟು 23 ಗೇಟ್‌ಗಳ ಕೆಲಸ ಮುಗಿಯುವ ನಿರೀಕ್ಷೆಯಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ತಿಳಿಸಿದರು.

ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ 19ನೇ ಕ್ರಸ್ಟ್ ಗೇಟ್ ಅಳವಡಿಕೆ ಕಾರ್ಯವನ್ನು ಪರಿಶೀಲನೆ ನಡೆಸಿ ನಂತರ ಮಾಧ್ಯಮಗಳ ಜೊತೆಗೆ ಮಾತನಾಡಿದರು. ಜಲಾಶಯದ ಮೇಲ್ಭಾಗಕ್ಕೆ ತೆರಳಿ, ತಾಂತ್ರಿಕ ತಂಡವು ನಡೆಸುತ್ತಿರುವ ಗೇಟ್ ಅಳವಡಿಕೆಯ ಅಂತಿಮ ಹಂತದ ಕೆಲಸ ಕಾರ್ಯಗಳನ್ನು ಎನ್.ಎಸ್.ಬೋಸರಾಜು ಖುದ್ದು ವೀಕ್ಷಿಸಿದರು.

ಎಕ್ಸ್‌ಪರ್ಟ್ ಟೀಮ್ ಮತ್ತು ಚೀಫ್ ಎಂಜಿನಿಯರ್‌ಗಳ ಪ್ರಕಾರ, ಗೇಟ್ ಬದಲಾವಣೆಯ ಸಮಯದಲ್ಲಿ ಹಳೆಯ ಅಣೆಕಟ್ಟಿನ ರಚನೆಗೆ ಯಾವುದೇ ತೊಂದರೆಯಾಗಿಲ್ಲ. ಏಪ್ರಿಲ್ ತಿಂಗಳಿನಲ್ಲಿ ಉಳಿದ 10 ಗೇಟ್‌ಗಳನ್ನು ಅಳವಡಿಸಿ, ಮೇ ಅಂತ್ಯದೊಳಗೆ ಕ್ರಸ್ಟ್ ಗೇಟ್ ಅಳವಡಿಕೆ ಸಂಪೂರ್ಣ ಕಾಮಗಾರಿ ಪೂರ್ಣಗೊಳ್ಳುವ ಭರವಸೆ ಇದೆ. ಕಾಮಗಾರಿಯು ನಿರೀಕ್ಷಿತ ಸಮಯಕ್ಕಿಂತ ವೇಗವಾಗಿ ಸಾಗುತ್ತಿದ್ದು, ಜೂನ್‌ನಲ್ಲಿ ಆರಂಭವಾಗುವ ಮುಂಗಾರು ಮಳೆಗಾಲದ ವೇಳೆಗೆ ಜಲಾಶಯ ಸಂಪೂರ್ಣ ಸಿದ್ಧವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನ ಸಮಸ್ಯೆಗೆ ಪರಿಹಾರವಾಗಿ 'ನವಲಿ' ಯೋಜನೆಯ ಪ್ರಸ್ತಾವನೆಯನ್ನು ಮಂಡಳಿ ಮತ್ತು ಸಂಬಂಧಿತ ರಾಜ್ಯ ಸರ್ಕಾರಗಳಿಗೆ ಕಳುಹಿಸಲಾಗಿದೆ. ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರಿಗೂ ಸಹ ಪತ್ರ ವ್ಯವಹಾರ ನಡೆಸಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳ ಮಟ್ಟದಲ್ಲಿ ಮಾತುಕತೆ ನಡೆಯುತ್ತಿದೆ. ತೆಲಂಗಾಣ ಸರ್ಕಾರದೊಂದಿಗೂ ಸಮನ್ವಯ ಸಾಧಿಸಲು ಪ್ರಯತ್ನಿಸಲಾಗುತ್ತಿದ್ದು, ವಿವಿಧ ತಾಂತ್ರಿಕ ಕಾರಣಗಳಿಂದ ವಿಳಂಬವಾಗುತ್ತಿದೆ. ಈ ತಾಂತ್ರಿಕ ಸಮಸ್ಯೆಗಳು ಬಗೆಹರಿದ ನಂತರ ಪೂರ್ಣ ಸಹಕಾರ ಸಿಗುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಈ ಬಗ್ಗೆ ರಾಜ್ಯದ ವಿವಿಧ ಚುನಾಯಿತ ಪ್ರತಿನಿಧಿಗಳ ನಿಯೋಗವು ನವದೆಹಲಿಯಲ್ಲಿ ಜಲಶಕ್ತಿ ಸಚಿವಾಲಯದ ಅಧಿಕಾರಿಗಳು ಮತ್ತು ವಿವಿಧ ರಾಜ್ಯಗಳ ಸಂಸದರೊಂದಿಗೆ ಮಹತ್ವದ ಚರ್ಚೆ ನಡೆಸಿದೆ. ಕೇಂದ್ರ ಸಚಿವರು ಮತ್ತು ಅಧಿಕಾರಿಗಳು ಕರ್ನಾಟಕದ ನೀರಾವರಿ ಯೋಜನೆಗಳ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಚುನಾವಣಾ ನೀತಿ ಸಂಹಿತೆಯ ಪ್ರಕ್ರಿಯೆಗಳ ನಂತರ ಮತ್ತೊಂದು ಸುತ್ತಿನ ಸಭೆ ನಡೆಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಹಾಗೂ ಮಸ್ಕಿ ಶಾಸಕ ಬಸವನಗೌಡ ತುರುವಿಹಾಳ, ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಪೊಲೀಸ್ ಅಧೀಕ್ಷಕ ಡಾ.ಮಂಜುನಾಥ್, ಕೊಪ್ಪಳ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತ್ ಕುಮಾರ್, ಟಿಬಿ ಬೋರ್ಡ್ ಹಾಗೂ ಕೆ.ಎನ್.ಎನ್.ಎಲ್. ಅಧಿಕಾರಿಗಳಾದ ಮುಖ್ಯ ಇಂಜಿನಿಯರ್ ಶ್ರೀನಿವಾಸ ಮಲ್ಲಿಗಿವಾಡ, ಎಇಇ ಧರ್ಮರಾಜ್ ಹಾಗೂ ಜ್ಞಾನೇಶ್ವರ, ಸೆಕ್ಷನ್ ಅಧಿಕಾರಿಗಳಾದ ಜಿ. ಕಿರಣ, ಪಂಪಾಪತಿ ಡಿ.ಕೆ. ಮತ್ತು ಹುಲಿರಾಜ್ ಸೇರಿದಂತೆ ಇತರೆ ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.


# 50 ವರ್ಷ ಹಿಂದೆ ರಾಜಕಾಲುವೆ ಇದ್ದ ನೆಪ: ರಸ್ತೆ ತೆರವು ಕಾರ್ಯಾಚರಣೆಗೆ ಹೈಕೋರ್ಟ್ ತಡೆಯಾಜ್ಞೆ

**ಬೆಂಗಳೂರು,ಮಾ.21-**50 ವರ್ಷಗಳ ಹಿಂದೆ ಕಾಲುವೆ ಇತ್ತು ಎಂಬ ಕಾರಣಕ್ಕೆ ಆನೇಕಲ್ ತಾಲೂಕಿನ ಆಲಿಬೊಮ್ಮಸಂದ್ರ ಮತ್ತು ಮುತಾನಲ್ಲೂರು ಅಮಾನಿಕೆರೆ ಗ್ರಾಮದ ನಡುವೆ ಹಾದುಹೋಗುವ ರಸ್ತೆಯ ತೆರವಿಗೆ ಮುಂದಾಗಿದ್ದ ಬೆಂಗಳೂರು ನಗರ ಜಿಲ್ಲಾಧಿಕಾರಿ ಮತ್ತು ಆನೇಕಲ್ ತಹಶೀಲ್ದಾರ್ ಕ್ರಮಕ್ಕೆ ಹೈಕೋರ್ಟ್ ತಡೆ ನೀಡಿದೆ. ಅಲ್ಲದೇ, ರಸ್ತೆ ತೆರವು ಕಾರ್ಯಾಚರಣೆ ಮುಂದುವರೆಸದಂತೆ ನಿರ್ದೇಶಿಸಿ ಮಧ್ಯಂತರ ಆದೇಶ ಮಾಡಿದೆ.

ಆನೇಕಲ್ ತಹಶೀಲ್ದಾರ್ ಅವರು ರಸ್ತೆ ತೆರವಿಗೆ ಮುಂದಾದ ಹಿನ್ನೆಲೆಯಲ್ಲಿ, ಬೆಂಗಳೂರು ನಗರ ಜಿಲ್ಲೆಯ ಸರ್ಜಾಪುರ ಹೋಬಳಿಯ ಆಲಿಬೊಮ್ಮಸಂದ್ರ ಗ್ರಾಮದ ನಿವಾಸಿ ಆರ್. ಸುಜಾತ ಮತ್ತಿತರರು ಮೇಲ್ಮನವಿ ಸಲ್ಲಿಸಿ, ತುರ್ತು ವಿಚಾರಣೆಗೆ ಕೋರಿದ್ದರು.

ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ, ರಜೆಯಿದ್ದರೂ ಮೇಲ್ಮನವಿದಾರರ ಮನವಿ ಮೇರೆಗೆ ಮಾರ್ಚ್19ರಂದು ಮಧ್ಯಾಹ್ನ 3.30ಕ್ಕೆ ತುರ್ತು ಕಲಾಪ ನಡೆಸಿದ ನ್ಯಾಯಮೂರ್ತಿ ಬಿ.ಎಂ. ಶ್ಯಾಮ್ ಪ್ರಸಾದ್ ಮತ್ತು ನ್ಯಾಯಮೂರ್ತಿ ಅನಂತ ರಾಮನಾಥ ಹೆಗಡೆ ಅವರ ಪೀಠ, ಈ ಮಧ್ಯಂತರ ಆದೇಶ ಮಾಡಿದೆ.

ಅಲ್ಲದೆ, ಮೇಲ್ಮನವಿದಾರರು ಸಲ್ಲಿಸಿದ ಫೋಟೋಗಳನ್ನು ಪರಿಶೀಲಿಸಿದರೆ, ಪ್ರಕರಣದಲ್ಲಿ ಜಿಲ್ಲಾಧಿಕಾರಿ ಮತ್ತು ತಹಶೀಲ್ದಾರ್ ಅವರು ಏಕಸದಸ್ಯ ಪೀಠದ ಆದೇಶಕ್ಕೆ ಕಾಯಬೇಕೇ ಮತ್ತು ಕಾಯುವ ಅಗತ್ಯವಿಲ್ಲದಿದ್ದರೆ, ವಿಶೇಷವಾಗಿ ನ್ಯಾಯಾಲಯದ ಕಲಾಪಗಳು ನಡೆಯದ ಮಾ.18 ಅಥವಾ 19ನೇ ದಿನವನ್ನು ರಸ್ತೆ ತೆರವಿಗೆ ಆಯ್ಕೆ ಮಾಡಬಹುದೇ? ಎಂದು ಪ್ರಶ್ನಿಸಿತು.



ಅಲ್ಲದೇ, ಆದೇಶ ಪ್ರತಿಗೆ ಕಾಯದೇ ರಸ್ತೆ ತೆರವಿಗೆ ಮಾ.18 ಮತ್ತು 19 ಅನ್ನು ಏಕೆ ಆಯ್ಕೆ ಮಾಡಿಕೊಳ್ಳಲಾಯಿತು ಎಂಬ ಬಗ್ಗೆ ವಿವರಣೆ ನೀಡಿ ತಹಶೀಲ್ದಾರ್ ಅವರು ಮುಂದಿನ ವಿಚಾರಣೆ ವೇಳೆ ನ್ಯಾಯಾಲಯಕ್ಕೆ ಪ್ರಮಾಣಪತ್ರ ಸಲ್ಲಿಸಬೇಕು. ಅಲ್ಲದೇ, ಜಿಲ್ಲಾಧಿಕಾರಿ, ತಹಶೀಲ್ದಾರ್ ಅಥವಾ ಸಂಬಂಧಪಟ್ಟ ಪೊಲೀಸರಾಗಲಿ ಮುಂದಿನ ವಿಚಾರಣೆವರೆಗೆ ಪ್ರಕರಣದಲ್ಲಿ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದು. ತಹಶೀಲ್ದಾರ್ ಅವರು ಈ ರಸ್ತೆಯು ಸಂಚಾರಯೋಗ್ಯವಾಗಿದೆಯೇ ಎಂಬುದನ್ನು ಖಾತರಿಪಡಿಸಿಕೊಳ್ಳಲು ಮುಕ್ತರಾಗಿದ್ದಾರೆ ಎಂದು ನಿರ್ದೇಶಿಸಿ, ವಿಚಾರಣೆಯನ್ನು ಮಾ.25ಕ್ಕೆ ಮುಂದೂಡಿತು.

ವಿಚಾರಣೆ ವೇಳೆ, ಮೇಲ್ಮನವಿದಾರರ ಪರ ವಕೀಲ ಎ.ಮಧುಸೂದನ ರಾವ್, ಮೇಲ್ಮನವಿದಾರರು ಆಲಿಬೊಮ್ಮಸಂದ್ರ ಗ್ರಾಮದ ಸರ್ವೇ ನಂ.21ರಲ್ಲಿನ ಮೂರು ಎಕರೆ 15 ಗುಂಟೆ ಜಮೀನಿನ ಮಾಲೀಕರಾಗಿದ್ದಾರೆ. ಜಮೀನು ದಕ್ಷಿಣ ಕಡೆಯಿಂದ ಮುತಾನಲ್ಲೂರು ಅಮಾನಿಕೆರೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ 30 ಅಡಿ ವಿಸ್ತೀರ್ಣದ ರಸ್ತೆ ಹಾದು ಹೋಗಲಿದೆ. ಆದರೆ, 50 ವರ್ಷಗಳ ಹಿಂದೆ ಈ ರಸ್ತೆಯಿರುವ ಜಾಗ ಕಾಲುವೆ ಇತ್ತು. ಕಾಲುವೆ ಜಾಗದಲ್ಲಿ ರಸ್ತೆ ನಿರ್ಮಾಣ ಮಾಡಲಾಗಿದೆ. ಇದರಿಂದ ರಸ್ತೆ ತೆರವುಗೊಳಿಸುವಂತೆ ಸೂಚಿಸಿ ಬೆಂಗಳೂರು ನಗರ ಜಿಲ್ಲಾಧಿಕಾರಿ ಆನೇಕಲ್ ತಹಶೀಲ್ದಾರ್‌ಗೆ 2025ರ ಜು.20ರಂದು ಪತ್ರ ಬರೆದಿದ್ದರು ಎಂದು ವಿವರಿಸಿದರು.

ಅಲ್ಲದೆ, ಈ ಪತ್ರ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿತ್ತು. ಅರ್ಜಿ ವಿಚಾರಣೆ ನಡೆಸಿದ ಏಕಸದಸ್ಯ ಪೀಠವು ಪತ್ರವು ಜಿಲ್ಲಾಧಿಕಾರಿ ಮತ್ತು ತಹಶೀಲ್ದಾರ್ ನಡುವಿನ ಆಂತರಿಕ ಸಂವಹನವಾಗಿದೆ. ರಸ್ತೆಯ ಜಾಗವು ಕಾಲುವೆಗೆ ಸೇರಿದ್ದಾಗಿದ್ದು, ರಸ್ತೆ ತೆರವುಗೊಳಿಸಬೇಕು ಎಂಬ ಉದ್ದೇಶವು ಅಧಿಕಾರಿಗಳು ಹೊಂದಿದ್ದರೆ, ಆ ಸಂಬಂಧ ಕಾನೂನು ಪ್ರಕಾರ ಕ್ರಮ ಜರುಗಿಸಬಹುದು ಎಂದು ತಿಳಿಸಿ ಅರ್ಜಿ ಇತ್ಯರ್ಥಪಡಿಸಿದೆ. ವಿಸ್ತೃತ ಆದೇಶವು ಇನ್ನೂ ಬಿಡುಗಡೆಯಾಗದಿದ್ದರೂ ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಮಾ.18 ಮತ್ತು 19ರಂದು ಹೈಕೋರ್ಟ್ ಕಾರ್ಯನಿರ್ವಹಿಸುವುದಿಲ್ಲ ಎಂಬ ಉದ್ದೇಶದಿಂದ ಅಧಿಕಾರಿಗಳು ರಸ್ತೆ ತೆರವುಗೊಳಿಸುತ್ತಿದ್ದಾರೆ. ಈಗಾಗಲೇ ರಸ್ತೆಯ ಡಾಂಬರ್ ಕಿತ್ತುಹಾಕಲಾಗಿದೆ. ವಾಸ್ತವವಾಗಿ ರಸ್ತೆ ಜಾಗದಲ್ಲಿ ಕಾಲುವೆ ಇರಲಿಲ್ಲ, ಇದೀಗ ರಸ್ತೆ ತೆರವುಗೊಳಿಸಿದರೆ ಸಾರ್ವಜನಿಕರ ಸಂಚಾರಕ್ಕೆ ಅಡ್ಡಿಯುಂಟಾಗುತ್ತದೆ. ಈಗಾಗಲೇ ಈ ಸುತ್ತಲಿನ ಜಾಗದಲ್ಲಿ ಸರ್ಕಾರದ ಅನುಮೋದನೆಯೊಂದಿಗೆ ಲೇಔಟ್ ನಿರ್ಮಿಸಲಾಗಿದೆ ಎಂದು ವಿವರಿಸಿ ಫೋಟೋ ಸಲ್ಲಿಸಿದರು.

ಸರ್ಕಾರದ ಪರ ವಕೀಲರು, ಪ್ರಕರಣ ಸಂಬಂಧ ಸಂಬಂಧಪಟ್ಟ ಅಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದು ಸಲ್ಲಿಸಿದ ನಂತರ ಮೇಲ್ಮನವಿ ವಿಚಾರಣೆ ನಡೆಸಬೇಕು ಎಂದು ಕೋರಿದರು.

# ಮಹಿಳೆಯರೊಂದಿಗೆ ಡಿಜಿಪಿ ರಾಮಚಂದ್ರರಾವ್ ಅಸಭ್ಯ ವರ್ತನೆಯ ವಿಡಿಯೋ ಅಸಲಿ: ಸರ್ಕಾರಕ್ಕೆ ಪೊಲೀಸ್ ಇಲಾಖೆ ವರದಿ

**ಬೆಂಗಳೂರು,ಮಾ.21-**ಮಹಿಳೆಯರೊಂದಿಗೆ ಡಿಜಿಪಿ ಕೆ.ರಾಮಚಂದ್ರರಾವ್ ಅವರ ಅಸಭ್ಯ ವರ್ತನೆಯ ವಿಡಿಯೋ ಕೃತಕ ಬುದ್ಧಿಮತ್ತೆ (ಎಐ)ಯಿಂದ ತಯಾರಿಸಿದ ಅಥವಾ ಡೀಪ್ ಫೇಕ್ ಮೂಲಕ ತಯಾರಿಸಿದ್ದು ಅಲ್ಲ, ಅಸಲಿ ವಿಡಿಯೋ ಎಂದು ಸರ್ಕಾರಕ್ಕೆ ಪೊಲೀಸ್ ಇಲಾಖೆ ವರದಿ ನೀಡಿದೆ. ಈ ಮೂಲಕ ನಿವೃತ್ತಿಯ ಅಂಚಿನಲ್ಲಿರುವ ರಾಮಚಂದ್ರರಾವ್‌ಗೆ ಕಾನೂನು ಸಂಕಷ್ಟ ಎದುರಾಗಿದೆ.

ಪೊಲೀಸ್ ಸಮವಸ್ತ್ರದಲ್ಲಿ ಕಚೇರಿಯಲ್ಲೇ ಮಹಿಳೆಯರೊಂದಿಗೆ ರಾಮಚಂದ್ರರಾವ್ ಅಸಭ್ಯ ವರ್ತನೆ ತೋರಿರುವ ಆರೋಪ ಸಂಬಂಧ ಕಳೆದ ಜನವರಿಯಲ್ಲಿ ವಿಡಿಯೋ ವೈರಲ್ ಆಗಿ ಸಂಚಲನ ಸೃಷ್ಟಿಸಿತ್ತು. ಇದರಿಂದ ಪೊಲೀಸ್ ಇಲಾಖೆ ತೀವ್ರ ಮುಜುಗರಕ್ಕೀಡಾಗಿತ್ತು. ಈ ವೇಳೆ ಪ್ರತಿಕ್ರಿಯಿಸಿದ್ದ ರಾವ್, ತಮ್ಮ ತೇಜೋವಧೆ ಮಾಡಲು ಕಿಡಿಗೇಡಿಗಳು ಎಐ ವಿಡಿಯೋ ಮಾಡಿದ್ದಾರೆ ಎಂದು ಹೇಳಿದ್ದರು.

ರಾವ್ ಅವರನ್ನು ಕೂಡಲೇ ಅಮಾನತು ಮಾಡಿ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಗೃಹ ಇಲಾಖೆ, ಎಡಿಜಿಪಿ ಆರ್.ಹಿತೇಂದ್ರ ಅವರ ನೇತೃತ್ವದ ತಂಡ ರಚಿಸಿ ಸಮಗ್ರ ತನಿಖೆ ನಡೆಸಿ ವರದಿ ನೀಡುವಂತೆ ಸೂಚಿಸಿತ್ತು. ಈ ತಂಡ ತನಿಖೆ ನಡೆಸಿ 100 ಪುಟಗಳ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಮಹಿಳೆಯರೊಂದಿಗೆ ರಾಮಚಂದ್ರರಾವ್ ಇರುವ ವಿಡಿಯೋ ಎಐ ಅಥವಾ ಡೀಪ್ ಫೇಕ್ ಆಗಿಲ್ಲ, ವಿಡಿಯೋ ಅಸಲಿಯಾಗಿದೆ ಎಂದು ಎಫ್‌ಎಸ್‌ಎಲ್ ತನ್ನ ವರದಿಯಲ್ಲಿ ದೃಢಪಡಿಸಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ರಾಮಚಂದ್ರರಾವ್‌ಗೆ ನೋಟಿಸ್: ವೈರಲ್ ಆಗಿದ್ದ ವಿಡಿಯೋ ನೈಜವಾಗಿದೆ. ರಾಮಚಂದ್ರರಾವ್ 2016-17ನೇ ಸಾಲಿನಲ್ಲಿ ಬೆಳಗಾವಿ ವಲಯ ಐಜಿಪಿ ಆಗಿದ್ದಾಗ ಈ ಘಟನೆ ನಡೆದಿದೆ.

ಈ ವೇಳೆ ಕಚೇರಿ ಸಿಬ್ಬಂದಿಗಳಾಗಿ ಕೆಲಸ ಮಾಡುತ್ತಿದ್ದವರು ಇಬ್ಬರು ಮಹಿಳೆಯರನ್ನು ಗುರುತು ಹಿಡಿದಿದ್ದು ರಾಮಚಂದ್ರರಾವ್ ಅವರ ಕಚೇರಿಗೆ ಆಗಾಗ ಬಂದು ಹೋಗುತ್ತಿರುವುದಾಗಿ ಹೇಳಿಕೆ ನೀಡಿದ್ದಾರೆ.

ವಿಡಿಯೋ ಬೆಳಕಿಗೆ ಬರುತ್ತಿದ್ದಂತೆ ಮಹಿಳೆಯರಿಬ್ಬರೂ ನಾಪತ್ತೆಯಾಗಿದ್ದಾರೆ. ಅವರನ್ನು ಪತ್ತೆ ಹಚ್ಚಿ ಹೇಳಿಕೆ ಪಡೆಯಬೇಕಾಗಿದೆ. ಎಫ್‌ಎಸ್‌ಎಲ್ ವರದಿ ಎಐ ವಿಡಿಯೋ ಅಲ್ಲ ಎಂದು ಸ್ಪಷ್ಟಪಡಿಸಿದೆ. ಮೇಲ್ನೋಟಕ್ಕೆ ಕೃತ್ಯವೆಸಗಿರುವುದು ಸಾಬೀತಾದ ಹಿನ್ನೆಲೆಯಲ್ಲಿ ಸಿಬ್ಬಂದಿ ಹಾಗೂ ಆಡಳಿತ ಸುಧಾರಣೆ ಇಲಾಖೆ (ಡಿಪಿಎಆರ್) ರಾಮಚಂದ್ರರಾವ್‌ಗೆ ಬುಧವಾರ ಸಂಜೆ ನೋಟಿಸ್ ನೀಡಿದೆ ಎಂದು ಮೂಲಗಳು ತಿಳಿಸಿವೆ.

## ದಾವಣಗೆರೆ ಉಪಚುನಾವಣಾ ಅಭ್ಯರ್ಥಿಗಳ ಆಸ್ತಿ ಘೋಷಣೆ

# ಸಮರ್ಥ, ಶ್ರೀನಿವಾಸ್ ಇಬ್ಬರೂ ಕೋಟಿವೀರರು

**ದಾವಣಗೆರೆ,ಮಾ.21-**ದಾವಣಗೆರೆ ದಕ್ಷಿಣ ಮತಕ್ಷೇತ್ರದ ಉಪಚುನಾವಣಾ ಕಣದಲ್ಲಿ ಕೈ-ಕಮಲ ನಡುವೆ ಜಿದ್ದಾಜಿದ್ದಿ ಏರ್ಪಟ್ಟಿದೆ. ಈಗಾಗಲೇ, ಕಾಂಗ್ರೆಸ್ ಹಾಗೂ ಬಿಜೆಪಿಯಿಂದ ಸ್ಪರ್ಧಾಳುಗಳು ಶುಕ್ರವಾರ ನಾಮಪತ್ರ ಸಲ್ಲಿಕೆ ಮಾಡಿದ್ದು, ತಮ್ಮ ಆಸ್ತಿ ವಿವರ ಘೋಷಿಸಿದ್ದಾರೆ.

ಬಿ ಫಾರಂ ಸಿಗುವ ಮುನ್ನವೇ ನಾಮಪತ್ರ ಸಲ್ಲಿಸಿರುವ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಶಾಮನೂರು ಅವರು ಚುನಾವಣಾಧಿಕಾರಿಗೆ ತಮ್ಮ ಆಸ್ತಿ ಬಗ್ಗೆ ಅಫಿಡವಿಟ್ ಸಲ್ಲಿಸಿದ್ದಾರೆ. ರಾಜಕೀಯಕ್ಕೆ ಪದಾರ್ಪಣೆ ಮಾಡುತ್ತಿರುವ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರ ಪುತ್ರ ಸಮರ್ಥ್, ಯುವ ಉದ್ಯಮಿಯಾಗಿದ್ದು ಒಟ್ಟು 4.25 ಕೋಟಿ ರೂ.ಗೂ ಅಧಿಕ ಮೌಲ್ಯದ ಸ್ಥಿರ ಮತ್ತು ಚರ ಆಸ್ತಿ ಹೊಂದಿರುವುದಾಗಿ ಅಫಿಡವಿಟ್‌ನಲ್ಲಿ ವಿವರ ನೀಡಿದ್ದಾರೆ. 2.17 ಕೋಟಿ ರೂ. ಮೌಲ್ಯದ ಚರ ಆಸ್ತಿ ಹಾಗೂ 2.08 ಕೋಟಿ ಮೌಲ್ಯದ ಕೃಷಿ ಭೂಮಿ ಸೇರಿದಂತೆ ಸ್ಥಿರ ಆಸ್ತಿಯಿದೆ ಎಂದು ಉಲ್ಲೇಖಿಸಿದ್ದಾರೆ.





ಸಮರ್ಥ್ ಶಾಮನೂರು ದಾವಣಗೆರೆ ತಾಲೂಕಿನ ಆನೆಕೊಂಡ ಹಾಗು ಬೇತೂರು ಗ್ರಾಮಗಳಲ್ಲಿ ಒಟ್ಟು 6 ಎಕರೆ 14 ಗುಂಟೆ ಕೃಷಿ ಭೂಮಿ ಹೊಂದಿದ್ದು, ಅವರ ಹೆಸರಿನಲ್ಲಿ 8.35 ಲಕ್ಷ ರೂ. ನಗದು ಹಣವಿದೆ. ಅಲ್ಲದೆ ವಿವಿಧ ಬ್ಯಾಂಕ್ ಖಾತೆಗಳಲ್ಲಿ ಹಣ ಹಾಗೂ 14.45 ಲಕ್ಷ ರೂ. ಮೌಲ್ಯದ ಚಿನ್ನಾಭರಣಗಳಿವೆ. ಆಸ್ತಿಯ ಜೊತೆಗೆ ಸಮರ್ಥ್ ಅವರ ಹೆಸರಿನಲ್ಲಿ ಒಟ್ಟು 3.52 ಕೋಟಿ ರೂ. ಮೊತ್ತದ ಸಾಲ ಹಾಗೂ ಹೊಣೆಗಾರಿಕೆಗಳಿವೆ. 2024-25ನೇ ಸಾಲಿನ ಆದಾಯ ತೆರಿಗೆ ಮರುಪಾವತಿಯಲ್ಲಿ ಅವರು 96.05 ಲಕ್ಷ ರೂ. ವಾರ್ಷಿಕ ಆದಾಯವನ್ನು ತೋರಿಸಲಾಗಿದೆ. ಸಮರ್ಥ್ ಮೇಲೆ ಯಾವುದೇ ಕ್ರಿಮಿನಲ್ ಪ್ರಕರಣಗಳಿಲ್ಲ ಎಂದು ಅಫಿಡವಿಟ್‌ನಲ್ಲಿ ವಿವರಿಸಲಾಗಿದೆ.

ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ಟ್.ದಾಸಕರಿಯಪ್ಪ ಆಸ್ತಿ ವಿವರ: ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ಟಿ.ದಾಸಕರಿಯಪ್ಪ ಅವರು ಶುಕ್ರವಾರ ದಾವಣಗೆರೆ ಪಾಲಿಕೆಗೆ ಆಗಮಿಸಿ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಕೆ ಮಾಡಿದ್ದು, 5.76 ಕೋಟಿ ರೂ.ಗೂ ಅಧಿಕ ಮೌಲ್ಯದ ಸ್ಥಿರ ಮತ್ತು ಚರಾಸ್ತಿಗಳನ್ನು ಹೊಂದಿರುವುದಾಗಿ ಘೋಷಿಸಿಕೊಂಡಿದ್ದಾರೆ.

ಶ್ರೀನಿವಾಸ್ ಹೆಸರಿನಲ್ಲಿ 34.79 ಲಕ್ಷ ರೂ. ಮೌಲ್ಯದ ಚರಾಸ್ತಿ ಹಾಗೂ 5.41 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿಗಳಿವೆ. ಸ್ಥಿರಾಸ್ತಿಯಲ್ಲಿ 1.13 ಕೋಟಿ ರೂ. ಬೆಲೆಬಾಳುವ ಪಿತ್ರಾರ್ಜಿತ ಕೃಷಿ ಭೂಮಿ ಹಾಗೂ 4.27 ಕೋಟಿ ರೂ. ಮೌಲ್ಯದ ಸ್ವಯಾರ್ಜಿತ ಆಸ್ತಿಗಳು ಸೇರಿವೆ. 3.60 ಲಕ್ಷರೂ. ನಗದು ಇರುವುದಾಗಿ ಅವರು ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ.

45 ವರ್ಷದ ಶ್ರೀನಿವಾಸ್ ಕೃಷಿ ಮತ್ತು ವ್ಯವಹಾರವನ್ನು ವೃತ್ತಿಯಾಗಿಸಿಕೊಂಡಿದ್ದಾರೆ. ತುಂಬಿಗೆರೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 2.96 ಲಕ್ಷ ರೂ. ಸಾಲ ಬಾಕಿ ಇದೆ. ಇವರು 1999-2000ನೇ ಸಾಲಿನಲ್ಲಿ ನಗರದ ಎ.ಆರ್.ಎಂ.ವಿಜ್ಞಾನ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಪೂರ್ಣಗೊಳಿಸಿದ್ದಾರೆ. ತಮ್ಮ ವಿರುದ್ಧ ಯಾವುದೇ ಕ್ರಿಮಿನಲ್ ಪ್ರಕರಣಗಳಿಲ್ಲ ಎಂದು ಅಫಿಡವಿಟ್‌ನಲ್ಲಿ ಉಲ್ಲೇಖಿಸಲಾಗಿದೆ.

# ಬೆಳಗಾವಿ: ಹೆಣ್ಣು ಮಗುವೆಂದು 15 ದಿನದ ಕಂದಮ್ಮನ ಕೊಲೆ ಮಾಡಿದ ಪಾಪಿ ತಂದೆ ಬಂಧನ

**ಬೆಳಗಾವಿ,ಮಾ.21-**ಹೆಣ್ಣು ಮಗು ಜನಿಸಿದೆ ಎಂಬ ಕಾರಣಕ್ಕೆ ವಿಷಪ್ರಾಶಣ ಮಾಡಿ 15 ದಿನದ ಕಂದಮ್ಮನನ್ನು ತಂದೆಯೇ ಕೊಲೆ ಮಾಡಿರುವ ಅಮಾನವೀಯ ಘಟನೆ ಬೆಳಗಾವಿ ತಾಲ್ಲೂಕಿನ ಉಕ್ಕಡ ಗ್ರಾಮದಲ್ಲಿ ನಡೆದಿದೆ.ಹದಿನೈದು ದಿನದ ನವಜಾತ ಶಿಶು ಪ್ರಿಯಾಂಕಾ(15 ದಿನ) ಕೊಲೆಯಾದ ದುರ್ದೈವಿ. ಬೆಳಗಾವಿ ತಾಲೂಕಿನ ಭೂತರಾಮನಹಟ್ಟಿ ಗ್ರಾಮದ ಭೀಮರಾಯ ಚಿಪ್ಪಾಡಿ ಕೊಲೆ ಮಾಡಿರುವ ಪಾಪಿ ತಂದೆ. ಸ್ವಂತ ತಂದೆಯಿಂದಲೇ ಮಗುವಿನ ಹತ್ಯೆ ನಡೆದಿರುವುದು ಪೊಲೀಸರ ತನಿಖೆಯಲ್ಲಿ ಬಹಿರಂಗವಾಗಿದೆ.

ಆರೋಪಿಯನ್ನ ಹಿಂಡಲಗಾ ಜೈಲಿಗೆ ಕಳುಹಿಸಿದ ಪೊಲೀಸರು: ನನ್ನ ಗಂಡನೇ ಮಗುವಿಗೆ ವಿಷ ನೀಡಿ ಕೊಲೆ ಮಾಡಿದ್ದಾರೆ ಎಂದು ಹೆಂಡತಿ ಶೀಲಾ ಚಿಪ್ಪಾಡಿ ಕಾಕತಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ಪೊಲೀಸರು ಆರೋಪಿ ಭೀಮರಾಯನನ್ನು ಬಂಧಿಸಿ ಹಿಂಡಲಗಾ ಜೈಲಿಗೆ ರವಾನಿಸಿದ್ದಾರೆ.


ಈ ಪ್ರಕರಣದ ಬಗ್ಗೆ ಪೊಲೀಸ್ ಕಮಿಷನರ್ ಬೊರಸೆ ಹೇಳಿದ್ದೇನು?: ಪ್ರಕರಣದ ಬಗ್ಗೆ ಮಾಹಿತಿ ನೀಡಿದ ಪೊಲೀಸ್



ಕಮಿಷನರ್ ಭೂಷಣ್ ಬೊರಸೆ, ಮಾರ್ಚ್ 17ರಂದು ಉಕ್ಕಡ ಗ್ರಾಮದಲ್ಲಿರುವ ಪತ್ನಿ ಶೀಲಾ ತವರು ಮನೆಗೆ, ಮಗುವನ್ನು ನೋಡುವ ನಾಟಕ ಮಾಡಿ ಬಂದಿದ್ದ ಆರೋಪಿ ಭೀಮರಾಯ ನಿಪ್ಪಲ್‌ನಲ್ಲಿ ವಿಷ ಹಾಕಿ ಮಗುವಿಗೆ ಕುಡಿಸಿದ್ದ. ಆ ದಿನ ಜೋರಾಗಿ ಮಳೆ ಬರುತ್ತಿತ್ತು. ಆ ಸಂದರ್ಭದಲ್ಲಿ ಮಗುವಿನ ತಾಯಿ ಮಲಗಿದ್ದರು. ವಿಷ ದೇಹದೊಳಗೆ ಹೋಗುತ್ತಿದ್ದಂತೆ ಬಾಯಲ್ಲಿ ನೊರೆ ಬಂದು ಮಗು ಅಳಲು ಶುರು ಮಾಡಿತ್ತು. ಮಗುವಿನ ಅಳುವಿನಿಂದ ತಾಯಿಗೆ ಎಚ್ಚರವಾಗಿದೆ. ಹೆಂಡತಿಗೆ ಎಚ್ಚರವಾಯ್ತು ಎನ್ನುವುದು ತಿಳಿಯುತ್ತಿದ್ದಂತೆ ಕೂಡಲೇ ಪತಿ ಅಲ್ಲಿಂದ ಓಡಿ ಪರಾರಿ ಆಗಿದ್ದಾನೆ. ಆತ ಅಲ್ಲಿಂದ ಓಡಿಹೋದ ಬಳಿಕ ಕೆಲವೇ ಸಮಯದಲ್ಲಿ ಮಗು ಸಾವನ್ನಪ್ಪಿತ್ತು. ಈ ಬಗ್ಗೆ ಪ್ರಾಥಮಿಕ ವಿಚಾರಣೆ ನಡೆಸಿ ಸದ್ಯ ಆರೋಪಿಯನ್ನು ಬಂಧಿಸಿದ್ದೇವೆ ಎಂದು ಮಾಹಿತಿ ನೀಡಿದರು.

ಮುಂದುವರಿದು ಪ್ರಕರಣದ ಬಗ್ಗೆ ಇನ್ನಷ್ಟು ಮಾಹಿತಿ ನೀಡಿದ ಅವರು, ಆ ಹೆಣ್ಣು ಮಗುವನ್ನು ನಿನ್ನ ತವರು ಮನೆಯಲ್ಲೇ ಬಿಟ್ಟು ನೀನೊಬ್ಬಳೇ ಮನೆಗೆ ಬರುವಂತೆ ಪತ್ನಿಗೆ ಆರೋಪಿ ಹೇಳುತ್ತಿದ್ದನಂತೆ. ಪ್ರಾಥಮಿಕ ಮಾಹಿತಿ ಪ್ರಕಾರ ಹೆಣ್ಣು ಮಗು ಜನಿಸಿದ್ದಕ್ಕೆ ಕೊಲೆ ಮಾಡಿರುವುದಾಗಿ ತನಿಖೆಯಲ್ಲಿ ಕಂಡು ಬಂದಿದೆ. ಹೆಚ್ಚಿನ ತನಿಖೆ ಕೈಗೊಂಡಿದ್ದೇವೆ ಎಂದು ಪ್ರಕರಣದ ಬಗ್ಗೆ ಸಂಪೂರ್ಣ ವಿವರಣೆಯನ್ನು ನೀಡಿದರು.

# ಬೆಂಗಳೂರು: ಮಧ್ಯರಾತ್ರಿ ಲ್ಯಾಂಬೋರ್ಗಿನಿ ಕಾರು ಚಾಲಕನ ಹುಚಾ ಎಫ್ಐಆರ್ ದಾಖಲು..; ಆರ್‌ಸಿ ಕ್ಯಾನ್ಸಲ್‌ಗೆ ಪೊಲೀಸರ ನಿರ್ಧಾರ!




**ಬೆಂಗಳೂರು,ಮಾ.21**-ಬೆಂಗಳೂರಿನಲ್ಲಿ ಮಧ್ಯರಾತ್ರಿ ನಡು ರಸ್ತೆಯಲ್ಲಿ ಡ್ರಿಫ್ಟಿಂಗ್ ಮಾಡಿದ ಆರೋಪದ ಮೇರೆಗೆ ದುಬಾರಿ ಲ್ಯಾಂಬೋರ್ಗಿನಿ ಕಾರು ಮತ್ತು ಅದರ ಚಾಲಕನ ವಿರುದ್ಧ ಇದೀಗ ಪೊಲೀಸ್ ಕೇಸ್ ದಾಖಲಾಗಿದೆ.

ಹೌದು... ನಗರದ ಪ್ರತಿಷ್ಠಿತ ಅನಿಲ್ ಕುಂಬ್ಳೆ ವೃತ್ತದಲ್ಲಿ ಐಷಾರಾಮಿ ಲ್ಯಾಂಬೋರ್ಗಿನಿ ಕಾರಿನಲ್ಲಿ ಚಾಲಕ ಅಪಾಯಕಾರಿ ಡ್ರಿಫ್ಟಿಂಗ್ ಮಾಡಿರುವ ವಿಡಿಯೊವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಇದೀಗ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಬೆಂಗಳೂರಿನ ಅನಿಲ್ ಕುಂಬ್ಳೆ ವೃತ್ತದಲ್ಲಿ ತಡರಾತ್ರಿ ಐಷಾರಾಮಿ ಲ್ಯಾಂಬೋರ್ಗಿನಿ ಕಾರು ಪದೇ ಪದೇ ಡ್ರಿಫ್ಟಿಂಗ್ ಸಾಹಸಗಳನ್ನು ಮಾಡುತ್ತಿರುವುದು ವಿಡಿಯೋದಲ್ಲಿ ಕಂಡುಬಂದಿದೆ.

ಈ ಕೃತ್ಯವು ಸುರಕ್ಷತಾ ಕಳವಳವನ್ನು ಹುಟ್ಟುಹಾಕುತ್ತದೆ. ಡ್ರಿಫ್ಟಿಂಗ್ ಬಳಿಕ ಲ್ಯಾಂಬೋರ್ಗಿನಿ ಚಾಲಕ ಅತಿ ವೇಗದಲ್ಲಿ ಪರಾರಿಯಾಗಿದ್ದು, ಕಬ್ಬನ್ ಪಾರ್ಕ್ ಸಂಚಾರ ಠಾಣೆ ಮಿತಿಯಲ್ಲಿ ಈ ಘಟನೆ ನಡೆದಿದೆ.

ಆಗಿದ್ದೇನು?

ಇಂದು ಬೆಳಗಿನ ಜಾವ ಸುಮಾರು 2 ರಿಂದ 3 ಗಂಟೆಯ ಸಮಯದಲ್ಲಿ, ಓಅ05ಫ್ಕೆ0009 ನೋಂದಣಿ ಸಂಖ್ಯೆಯ ಲ್ಯಾಂಬೋರ್ಗಿನಿ ಕಾರು ಚಾಲಕ ಅನಿಲ್ ಕುಂಬ್ಳೆ ಸರ್ಕಲ್‌ನಲ್ಲಿ ಸಾರ್ವಜನಿಕರ ಓಡಾಟದ ನಡುವೆಯೇ ಎರಡು-ಮೂರು ಬಾರಿ ಕಾರನ್ನು ರಸ್ತೆಯಲ್ಲೇ ಗಿರಗಿರನೆ ತಿರುಗಿಸಿ (ಡ್ರಿಫ್ಟಿಂಗ್) ಅಪಾಯಕಾರಿ ಸ್ಟಂಟ್ ಮಾಡಿದ್ದಾನೆ.

ಸ್ಟಂಟ್ ಮಾಡಿದ ಬಳಿಕ ಚಾಲಕ ಅತೀ ವೇಗವಾಗಿ ಅಲ್ಲಿಂದ ಪರಾರಿಯಾಗಿದ್ದಾನೆ. ಈ ದೃಶ್ಯ ಸ್ಥಳೀಯರೊಬ್ಬರ ಮೊಬೈಲ್‌ನಲ್ಲಿ ಸೆರೆಯಾಗಿದ್ದು, ಸದ್ಯ ಸೋಶೀಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಎಫ್ಐಆರ್ ದಾಖಲು

ಈ ಘಟನೆ ಕಬ್ಬನ್ ಪಾರ್ಕ್ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಅಜಾಗರೂಕತೆ ಮತ್ತು ಅಪಾಯಕಾರಿ ಚಾಲನೆಯ ಮೂಲಕ ಸಾರ್ವಜನಿಕರ ಜೀವಕ್ಕೆ ತೊಂದರೆ ನೀಡಿದ ಆರೋಪದಡಿ ಕಾರು ಮಾಲೀಕನ ವಿರುದ್ಧ ಎಫ್ಐಆರ್ (ಊಇಖ) ದಾಖಲಿಸಲಾಗಿದೆ.

ಆರ್ ಸಿ ರದ್ದು :ಈ ಘಟನೆ ಕುರಿತು ಪ್ರತಿಕ್ರಿಯಿಸಿರುವ ಪಶ್ಚಿಮ ವಿಭಾಗದ ಸಂಚಾರ ಪ್ರಭಾರ ಡಿಸಿಪಿ ಸಾಹಿಲ್ ಬಾಗ್ಲಾ ಅವರು, 'ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗಿದ್ದು, ಡ್ರಿಫ್ಟಿಂಗ್ ಮಾಡಿರುವುದು ರೆಕಾರ್ಡ್ ಆಗಿದೆ. ಕಾರಿನ ಮಾಲೀಕ ಯಾರು ಎಂಬ ಬಗ್ಗೆ ಪರಿಶೀಲನೆ ನಡೆಸುತ್ತಿದ್ದೇವೆ. ಬೆಂಗಳೂರಿನ ರಸ್ತೆಗಳಲ್ಲಿ ಈ ರೀತಿ ಸ್ಟಂಟ್ ಮಾಡಲು ಯಾರಿಗೂ ಅವಕಾಶವಿಲ್ಲ. ಇದು ಕಾನೂನುಬಾಹಿರ ಮತ್ತು ಅಪಾಯಕಾರಿ. ಆರೋಪಿಗಳನ್ನು ಪತ್ತೆ ಹಚ್ಚಿ ಕೇವಲ ದಂಡ ಮಾತ್ರವಲ್ಲದೆ, ಕಾರಿನ ಆರ್.ಸಿ (ಇ -ಖಿಜಜಿಶ್ಟಿಚಿಜಿಟ್ಲ ಇಟ್ಟಿಶಜ್ಟಿಜ್ಚಿಚಿಶಿಟಿ) ಕ್ಯಾನ್ಸಲ್ ಮಾಡಲು ಶಿಫಾರಸು ಮಾಡುತ್ತೇವೆ, ಎಂದು ಕಠಿಣ ಎಚ್ಚರಿಕೆ ನೀಡಿದ್ದಾರೆ.

ಸುಳ್ಳು ನಂಬರ್ ಪ್ಲೇಟ್?

ಹಲವು ವೆಬ್‌ಸೈಟ್‌ಗಳಲ್ಲಿ, ಬೆಂಗಳೂರು ಟ್ರಾಫಿಕ್ ಪೊಲೀಸರ ವೆಬ್‌ಸೈಟ್‌ನಲ್ಲಿ ಕಾರ್ನ್ ನೋಂದಣಿ ಸಂಖ್ಯೆ ಹಾಕಿ ಪರಿಶೀಲಿಸಿದ್ದು, ಎಲ್ಲಿಯೂ ಅದರ ಮಾಲೀಕರು ಯಾರು ಅನ್ನೋದ ಮಾಹಿತಿ ಸಿಕ್ಕಿಲ್ಲ. ಇದರ ನಡುವೆ ಕಾರ್ ಕರ್ನಾಟಕದಲ್ಲಿ ನೋಂದಣಿ ಆಗಿರುವುದೇ ಅನುಮಾನ. ಸುಳ್ಳು ನಂಬರ್ ಪ್ಲೇಟ್ ಹಾಕಿಕೊಂಡು ಓಡಾಡುತ್ತಿರಬಹುದು ಎಂದು ಅಂದಾಜಿಸಿದ್ದಾರೆ.

# ಬಡವರಿಂದ ಹಣ ವಸೂಲಿ ಮಾಡುವ ವೈದ್ಯರ ಬೆವರಿಳಿಸಿದ ಶಾಸಕ ಆರ್. ವಿ. ದೇಶಪಾಂಡೆ



**ಕಾರವಾರ,ಮಾ.21**-ಹೆರಿಗೆಯ ನಂತರ ಬಡ ರೋಗಿಗಳಿಂದ ಸಾವಿರಾರು ರೂಪಾಯಿ ಹಣ ವಸೂಲಿ ಮಾಡುತ್ತಿದ್ದ ವೈದ್ಯರ ವಿರುದ್ಧ ಹಿರಿಯ ಶಾಸಕ ಆರ್. ವಿ. ದೇಶಪಾಂಡೆ ಅವರು ಕೆಂಡಾಮಂಡಲರಾದ ಘಟನೆ ನಗರದಲ್ಲಿ ನಡೆದಿದೆ. ಸಾರ್ವಜನಿಕ ಆಸ್ಪತ್ರೆ ಮತ್ತು ತಾಯಿ-ಮಕ್ಕಳ ಆಸ್ಪತ್ರೆಯ ಆರೋಗ್ಯ ರಕ್ಷಾ ಸಮಿತಿ ಸಭೆಯಲ್ಲಿ ವೈದ್ಯರ ನಡೆಗೆ ಶಾಸಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ದಾಂಡೇಲಿಯ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆರಿಗೆ ಮತ್ತು ಸಿಸೇರಿಯನ್ ಆದ ನಂತರ ವೈದ್ಯರು ಬಡವರಿಂದ 15,000 ದಿಂದ 20,000 ರೂಪಾಯಿಗಳವರೆಗೆ ಹಣ ಪಡೆಯುತ್ತಿದ್ದಾರೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿಬಂದಿದ್ದವು. ಈ ಹಿನ್ನೆಲೆಯಲ್ಲಿ ಶಾಸಕರು ಶುಕ್ರವಾರ ನಡೆದ ಆರೋಗ್ಯ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿ ವೈದ್ಯರನ್ನು ತರಾಟೆಗೆ ತೆಗೆದುಕೊಂಡರು.

ವೈದ್ಯರ ಉತ್ತರಕ್ಕೆ ದೇಶಪಾಂಡೆ ಗರಂ : ಸಭೆಯಲ್ಲಿ ಹೆಸರಿಸಲಾದ ವೈದ್ಯರಾದ ಡಾ. ಅಖಿಲ ಕಿತ್ತೂರ ಹಾಗೂ ಡಾ. ಕೀರ್ತಿ ಅವರ ವಿರುದ್ಧ ಸಾರ್ವಜನಿಕರಿಂದ ಬಂದ ದೂರುಗಳ ಬಗ್ಗೆ ಶಾಸಕರು ಪ್ರಶ್ನಿಸಿದರು.

ಹೆರಿಗೆ ಮಾಡಿಸಲು ನೀವು ಎಷ್ಟು ಹಣ ಪಡೆಯುತ್ತೀರಿ? ಎಂದು ಶಾಸಕರು ನೇರವಾಗಿ ಪ್ರಶ್ನಿಸಿದಾಗ, ನಾವು ಯಾರಿಂದಲೂ ಕೇಳಿ ಪಡೆಯುತ್ತಿಲ್ಲ, ಅವರೇ ಖುಷಿಯಿಂದ ಕೊಟ್ಟದ್ದನ್ನು ಮಾತ್ರ ತೆಗೆದುಕೊಳ್ಳುತ್ತೇವೆ ಎಂದು ವೈದ್ಯರು ಸಮರ್ಥಿಸಿಕೊಳ್ಳಲು ಮುಂದಾದರು. ವೈದ್ಯರ ಈ ಈ ಉತ್ತರ ಕೇಳಿ ಸಿಟ್ಟಾದ ದೇಶಪಾಂಡೆ ಅವರು, ಕೊಟ್ಟಷ್ಟು ಪಡೆಯುತ್ತೇವೆ ಎಂದರೆ ಏನರ್ಥ? ನಿಮಗೆ ಮಾನ ಮರ್ಯಾದೆ ಇಲ್ವಾ? ಬಡವರಿಂದ ಸುಲಿಗೆ ಮಾಡುತ್ತೀರಾ? ಎಂದು ಗುಡುಗಿದರು.

ಕಟ್ಟುನಿಟ್ಟಿನ ಸೂಚನೆ ಹಾಗೂ ಪೊಲೀಸ್ ದೂರು: 'ಮುಂದೆ ಯಾರಿಂದಾದರೂ ಹಣ ಪಡೆದ ಮಾಹಿತಿ ಬಂದರೆ ನಿಮ್ಮ ಮೇಲೆ ಪೊಲೀಸ್ ಕೇಸ್ ದಾಖಲಿಸುತ್ತೇನೆ' ಎಂದು ಎಚ್ಚರಿಸಿದರು. ಇಲ್ಲಿಯವರೆಗೆ ಯಾರ್ಯಾರಿಂದ ಎಷ್ಟು ಹಣ ಪಡೆಯಲಾಗಿದೆ ಎಂಬ ಬಗ್ಗೆ ಸಂಪೂರ್ಣ ಮಾಹಿತಿ ಕಲೆ ಹಾಕುವಂತೆ ಸ್ಥಳದಲ್ಲಿದ್ದ ತಹಶಿಲ್ದಾರರಿಗೆ ಶಾಸಕರು ಸೂಚನೆ ನೀಡಿದರು.

ಶಾಸಕರ ಖಡಕ್ ಮಾತು : ಬಡವರ ಹತ್ತಿರ ಸುಲಿಗೆ ಮಾಡಿದರೆ ಹುಷಾರ್! ನನ್ನ ಮೇಲೆ ಪ್ರಕರಣ ದಾಖಲಾದರೂ ಸರಿ, ನನಗೆ ಏನು ಮಾಡಬೇಕೆಂದು ಗೊತ್ತಿದೆ ಎಂದು ಆರ್.ವಿ.ಡಿ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ಈ ಸಭೆಯಲ್ಲಿ ಆರೋಗ್ಯ ರಕ್ಷಣಾ ಸಮಿತಿಯ ಸದಸ್ಯರು ಹಾಗೂ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಶಾಸಕರ ಈ ಖಡಕ್ ಕ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

# ಏಳು ಜನ ವಿದ್ಯಾರ್ಥಿಗಳಿಗೆ ಮನಸೋಇಚ್ಛೆ ಥಳಿಸಿದ ಆರೋಪ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಪೊಲೀಸರು

**ಚಿಕ್ಕಮಗಳೂರು,ಮಾ.21**-ಮೂಡಿಗೆರೆ ತಾಲೂಕಿನ ಕೊಟ್ಟಿಗೆಹಾರ ಸಮೀಪದ ಶಾಲೆಯೊಂದರಲ್ಲಿ ಏಳು ವಿದ್ಯಾರ್ಥಿಗಳಿಗೆ ಶಾಲೆಯ ಪ್ರಾಂಶುಪಾಲರು ಮತ್ತು ಕೆಲ ಶಿಕ್ಷಕರು ಮನಸೋಇಚ್ಛೆ ಥಳಿಸಿದ್ದಾರೆ ಎಂಬ ಆರೋಪ ಕೇಳಿಬಂದ ಹಿನ್ನೆಲೆ ಬಣಕಲ್ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಆಟವಾಡುತ್ತಿದ್ದಾರೆ ಎಂಬ ಕಾರಣಕ್ಕೆ ನಮ್ಮನ್ನು ಶಾಲೆಯ ಅಂಡರ್‌ಗ್ರೌಂಡ್ ರೂಮಿನಲ್ಲಿ ಬಂಧಿಸಿ ನಮ್ಮ ಮೇಲೆ ಅಮಾನುಷ ರೀತಿ ವರ್ತನೆ ತೋರಿದ್ದಾರೆ. ಸ್ಥಳೀಯ ವಿದ್ಯಾರ್ಥಿಗಳೆಂಬ ಕಾರಣಕ್ಕೆ ಉದ್ದೇಶ ಪೂರ್ವಕವಾಗಿ ಹಲ್ಲೆ ಮಾಡಲಾಗಿದೆ ಎಂದು ವಿದ್ಯಾರ್ಥಿಗಳು ಆರೋಪಿ ಸಿದ್ದಾರೆ.

ಕೂಗಾಡಿದ ಹಿನ್ನೆಲೆ ಅನುಮಾನಗೊಂಡ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಸ್ಥಳಕ್ಕೆ ಬಂದ ಬಣಕಲ್ ಪೊಲೀಸರು ಎಲ್ಲಾ ಕೊಠಡಿಗಳನ್ನು ಪರಿಶೀಲಿಸಿದಾಗ, ಅಂಡರ್‌ಗ್ರೌಂಡ್ ರೂಮಿನಲ್ಲಿ ವಿದ್ಯಾರ್ಥಿಗಳು ಪತ್ತೆಯಾಗಿದ್ದಾರೆ. ಹಲ್ಲೆಗೊಳಗಾದ ಮಕ್ಕಳ ದೇಹದ ಮೇಲೆ ಗಾಯಗಳ ಗುರುತುಗಳಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆ ಕುರಿತು ಪ್ರಾಚಾರ್ಯರನ್ನು ವಿಚಾರಣೆಗೊಳಪಡಿಸಲಾಗಿದ್ದು, ಈ ಸಂಬಂಧ ಮುಂದಿನ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಈ ಕುರಿತು ಬಣಕಲ್ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರತಿಕ್ರಿಯೆ ನೀಡಿದ್ದು, ಶಾಲೆಯಲ್ಲಿ ಮಕ್ಕಳು ಜೋರಾಗಿ ಕಿರುಚಾಡಿದ ಶಬ್ಧ ಕೇಳಿದ, ಶಾಲೆಯ ಹಿಂಭಾಗದ ಕೆಲಸ ಮಾಡುತ್ತಿದ್ದ ಸ್ಥಳೀಯರು ಕೂಡಲೇ ನಮಗೆ ಫೋನ್ ಮಾಡಿ ವಿಚಾರ ತಿಳಿಸಿದರು. ನಾವು ಸ್ಥಳಕ್ಕೆ ಹೋಗಿ ಭೇಟಿ ಮಾಡಿ ಪರಿಶೀಲನೆ ನಡೆಸಿದಾಗ, ಏಳು ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆದಿರುವುದು ಬೆಳಕಿಗೆ ಬಂದಿದೆ. ನಿನ್ನೆ ರಾತ್ರಿ 10ನೇ ನೇ ತರಗತಿ ವಿದ್ಯಾರ್ಥಿಗಳು ಹಾಗೂ 9ನೇ ತರಗತಿ ವಿದ್ಯಾರ್ಥಿಗಳು ಜಗಳವಾಡಿದ್ದರು. ಈ ಘಟನೆ ತಿಳಿದ ಕೂಡಲೇ ಪ್ರಾಂಶುಪಾಲರು ಹಾಗೂ ಕೆಲ ಶಿಕ್ಷಕರು ಏಳು ಜನ ವಿದ್ಯಾರ್ಥಿಗಳಿಗೆ ಥಳಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದ್ದು, ಏಳು ಜನ ವಿದ್ಯಾರ್ಥಿಗಳಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಕೂಡಲೇ ಆ ವಿದ್ಯಾರ್ಥಿಗಳಿಗೆ ಮೂಡಿಗೆರೆ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಕುರಿತು ಪ್ರಾಂಶುಪಾಲರನ್ನು ವಿಚಾರಣೆ ಮಾಡಲಾಗಿದ್ದು, ಅವರು ತಮ್ಮ ಪ್ರತಿಕ್ರಿಯೆಯನ್ನು ನೀಡಿದ್ದಾರೆ. ಈ ಕುರಿತು ಯಾವುದೇ ಪ್ರಕರಣ ದಾಖಲಾಗಿಲ್ಲ. ಈ ಶಾಲೆ ಜಿಲ್ಲಾಧಿಕಾರಿಗಳ ಕೆಳಗೆ ಬರುವುದರಿಂದ ಜಿಲ್ಲಾಧಿಕಾರಿಗಳು ಏನು ಸೂಚನೆ ನೀಡುತ್ತಾರೋ, ಯಾವ ರೀತಿ ಕ್ರಮ ತೆಗೆದುಕೊಳ್ಳುತ್ತಾರೋ ಎಂಬುದನ್ನು ನೋಡಬೇಕು. ಯಾರಾದರೂ ಪ್ರಕರಣ ದಾಖಲು ಮಾಡಿದರೆ, ದಾಖಲಿಸಿಕೊಂಡು ಹೆಚ್ಚಿನ ತನಿಖೆ ನಡೆಸಲಾಗುತ್ತದೆ ಎಂದು ತಿಳಿಸಿದ್ದಾರೆ.

# ರಂಜಾನ್ ಹಬ್ಬ : ಪ್ರಾರ್ಥನೆ ಸಲ್ಲಿಸುವ ವೇಳೆ 25 ಜನರ ಮೇಲೆ ಹೆಜ್ಜೇನು ದಾಳಿ-ಐವರ ಸ್ಥಿತಿ ಗಂಭೀರ, ಜಿಲ್ಲಾಸ್ಪತ್ರೆಗೆ ದಾಖಲು

**ದಾವಣಗೆರೆ,ಮಾ.21**-ಜಿಲ್ಲೆಯಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಪ್ರಾರ್ಥನೆ ಸಲ್ಲಿಸುವ ವೇಳೆ ಜನರ ಮೇಲೆ ಹೆಜ್ಜೇನು ದಾಳಿ ಮಾಡಿರುವ ಘಟನೆ ತಾಲೂಕಿನ ಆನಗೋಡು ಗ್ರಾಮದಲ್ಲಿ ನಡೆದಿದೆ.

ನಮಾಜ್ ಮಾಡುವ ವೇಳೆ ಹೆಜ್ಜೇನು ಗೂಡಿಗೆ ಯಾರೋ ಕಲ್ಲಿನಿಂದ ಹೊಡೆದ ಪರಿಣಾಮ ಅವಾಂತರ ಸೃಷ್ಟಿಯಾಗಿದೆ. ಈ ವೇಳೆ ನಮಾಜ್ ಮಾಡ್ತಿದ್ದ ಮುಸ್ಲಿಂ ಬಾಂಧವರ ಮೇಲೆ ಹೆಜ್ಜೇನು ಏಕಾಏಕಿ ದಾಳಿ ಮಾಡಿದ್ದು, ಜನ ಧಿಕ್ಕಾಪಾಲಾಗಿ ಓಡಿರುವ ಘಟನೆ ನಡೆದಿದೆ.

ಸುಮಾರು 25 ಜನರ ಮೇಲೆ ಹೆಜ್ಜೇನು ದಾಳಿ ಮಾಡಿದ್ದು, ಗಾಯಗೊಂಡವರನ್ನು ಚಿಗಟೇರಿ ಜಿಲ್ಲಾಸ್ಪತ್ರೆಗೆ ದಾಖಲು ಮಾಡಲಾಗಿದೆ. ಐವರು ಎನ್‌ಐಸಿಯುನಲ್ಲಿದ್ದು, ಪರಿಸ್ಥಿತಿ ಗಂಭೀರವಾಗಿದೆ. ಹೆಚ್ಚಾಗಿ ಯುವಕರು, ಮಕ್ಕಳು, ಹೆಣ್ಣುಮಕ್ಕಳ ಮೇಲೆ ಜೇನುನೊಣಗಳು ದಾಳಿ ನಡೆಸಿವೆ ಎಂದು ಗ್ರಾಮ ಪಂಚಾಯತ್ ಸದಸ್ಯರು ಮಾಹಿತಿ ನೀಡಿದ್ದಾರೆ.

ವಿಷಯ ತಿಳಿದು ಮಾಯಕೊಂಡ ಶಾಸಕ ಬಸವಂತಪ್ಪ ಅವರು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು. ಬಳಿಕ ಈ ಕುರಿತು ಮಾತನಾಡಿದ ಅವರು, ಟಿವೃದ್ಧರು, ಮಕ್ಕಳು, ಯುವಕರ ಮೇಲೆ ಜೇನು ದಾಳಿ ಮಾಡಿದ್ದು,



ಅವರೀಗ ತೊಂದರೆಯಲ್ಲಿದ್ದಾರೆ. ಈಗಾಗಲೇ ಚಿಕಿತ್ಸೆ ಕೊಡಿಸಿ ಅವರನ್ನು ವಾರ್ಡ್‌ಗೆ ಶಿಫ್ಟ್ ಮಾಡಲಾಗಿದೆ. ಕೆಲ ಗಾಯಾಳುಗಳನ್ನು ಕರೆತರಲಾಗುತ್ತಿದೆ. ಮತ್ತಷ್ಟು ಜನರಿಗೆ ಆನಗೋಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲು ಹೇಳಿದ್ದೇನೆ. ಹೆಜ್ಜೇನು ದಾಳಿ ಮಾಡಿದ್ದರಿಂದ ವೃದ್ಧರ ಪರಿಸ್ಥಿತಿ ಚಿಂತಾಜನಕವಾಗಿದೆ. ಈದ್ ನ ನಮಾಜ್ ಮಾಡುವ ವೇಳೆ ಮಕ್ಕಳು ಹೆಜ್ಜೇನನ್ನು ಏಳಿಸಿ ಬಿಟ್ಟಿದ್ದಾರೆ. ಹೀಗಾಗಿ, ಅಲ್ಲಿದ್ದ ಜನರ ಮೇಲೆ ಹೆಜ್ಜೇನು ದಾಳಿ ಮಾಡಿವೆ. ಐದಾರು ಜನರು ಹೆಚ್ಚು ಸೀರಿಯಸ್ ಇದ್ದಾರೆ. ವೃದ್ಧರು ತಡೆದುಕೊಳ್ಳುತ್ತಿಲ್ಲ ಎಂದು ತಿಳಿಸಿದರು. ಗ್ರಾ. ಪಂ. ಸದಸ್ಯ ನಸ್ರುಲ್ಲಾ ಅವರು ಮಾತನಾಡಿ, ಹೆಜ್ಜೇನಿಗೆ ಯಾರೋ ಹುಡುಗರು ಕಲ್ಲು ಹೊಡೆದಿದ್ದಾರೆ. ಏನ್ ಆಗಿದೆ ಗೊತ್ತಿಲ್ಲ. ಅಚಾನಕ್ ಆಗಿದೆ, ನಮಗೆ ಗೊತ್ತಿದ್ದರೆ ಏನಾದರೂ ಮಾಡ್ತಿದ್ದೆವು. ಈಗಾಗಲೇ ಆನಗೋಡು ಆಸ್ಪತ್ರೆಯಲ್ಲಿ ತೋರಿಸಿದ್ದೇವೆ. ಒಬ್ಬೊಬ್ಬರೆ ಆಸ್ಪತ್ರೆಗೆ ಬರುತ್ತಿದ್ದಾರೆ. ಕೆಲವರ ಸ್ಥಿತಿ ಗಂಭೀರವಾಗಿದೆ. ಪೊಲೀಸರಿಗೂ ಕಚ್ಚಿದ್ದರಿಂದಾಗಿ ಅವರು ಓಡಿಹೋಗಿದ್ದಾರೆ ಎಂದು ತಿಳಿಸಿದರು.

# ಬೇಸಿಗೆಯಲ್ಲಿ ನೀರಿನ ಅಭಾವ ನೀಗಿಸಲು ಪಿಡಿಒಗಳ ಜೊತೆ ಸಭೆ ನಡೆಸುವಂತೆ ಸಿಇಒಗಳಿಗೆ ಸಚಿವ ಪ್ರಿಯಾಂಕ್ ಸೂಚನೆ

**ಬೆಂಗಳೂರು,ಮಾ.21**-ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ಅಭಾವ ಉಂಟಾದ ಸಂದರ್ಭಗಳಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಮುಂದಿನ ಮೂರು ತಿಂಗಳುಗಳ ಕಾಲ ಪ್ರತಿ 2ನೇ ಹಾಗೂ 4ನೇ ಸೋಮವಾರದಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಜೊತೆಯಲ್ಲಿ ಕಡ್ಡಾಯವಾಗಿ ಕುಡಿಯುವ ನೀರಿನ ಸಮಸ್ಯೆ ಕುರಿತ ವಸ್ತು ಸ್ಥಿತಿಯ ಬಗ್ಗೆ ಸಭೆ ನಡೆಸುವಂತೆ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದ್ದಾರೆ.

ಜೊತೆಗೆ ಪ್ರತಿ 2ನೇ ಹಾಗೂ 4ನೇ ಮಂಗಳವಾ ರದಂದು ಪತ್ರಿಕಾಗೋಷ್ಠಿ ಕರೆದು ಜಿಲ್ಲೆಗಳಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಕೈಗೊಂಡ ಕ್ರಮಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು.

ಕುಡಿಯುವ ನೀರಿನ ಅಭಾವ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ಎಲ್ಲಾ ಜಿಲ್ಲಾ ಪಂಚಾಯತ್‌ಗಳಲ್ಲಿ 24/7 ನಿಯಂತ್ರಣ ಕೊಠಡಿಗಳನ್ನು ತೆರೆದು, ಸಿಬ್ಬಂದಿಯನ್ನು ನಿಯೋಜಿಸಲು ಹಾಗೂ ತಾಲೂಕು ಮಟ್ಟದಲ್ಲಿ



ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಕ್ಷಿಪ್ರ ಕಾರ್ಯಪಡೆ (ಕ್ಷಚಿಟಜಿಢ ಡಿಚಿಶ್ಪಟ್ಟಿಜ್ಞಿ) ಯನ್ನು ರಚಿಸಿ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ತಿಳಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿನ ನೀರಿನ ಮೂಲಗಳನ್ನು ಶೇ.100ರಷ್ಟು ಭೌತಿಕ ಪರಿಶೀಲನೆ ನಡೆಸಿ, ಕೊಳವೆಬಾವಿಗಳ ಸುತ್ತಮುತ್ತಲೂ ಯಾವುದೇ ಕಲುಷಿತ ನೀರು ಅಥವಾ ಚರಂಡಿ ನೀರು ನಿಲ್ಲದಂತೆ ಹಾಗೂ ಕಲುಷಿತ ನೀರು ಸರಾಗವಾಗಿ ಹರಿಯಲು ಸೂಕ್ತ ಚರಂಡಿ ವ್ಯವಸ್ಥೆಯನ್ನು ಕೈಗೊಳ್ಳಬೇಕು. ಕೊಳವೆಬಾವಿ ಸುತ್ತ ಕಾಂಕ್ರೀಟ್‌ನಿಂದ ಕಟ್ಟೆಯನ್ನು ಕಟ್ಟಿ, ಕಲುಷಿತ ನೀರು ಕೊಳವೆಬಾವಿಗೆ ಸೇರದಂತೆ ಮುಂ ಜಾಗ್ರತೆ ವಹಿಸಲು ಅಧಿಕಾರಿಗಳಿಗೆ ಕಟ್ಟೆಚ್ಚರ ನೀಡಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ವಿವರಿಸಿದ್ದಾರೆ.

ನೀರಿನ ಮೂಲಗಳ ಸುರಕ್ಷತೆಯನ್ನು ಪರಿಣಾಮಕಾರಿಯಾಗಿ ನಿರ್ವಹಣೆ ಮಾಡಲು ಹಾಗೂ ಕುಡಿಯುವ ನೀರಿನ ಅಭಾವ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ಗ್ರಾಮಸ್ಥರಿಗೆ ಅಗತ್ಯ ಜಾಗೃತಿ ಮೂಡಿಸಲು ಸಹ ಸೂಚನೆ ನಿಡಲಾಗಿದೆ. ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಹಾಲಿ ಇರುವ ಜಲಮೂಲಗಳು ಬತ್ತಿಹೋಗಿರುವುದರಿಂದ ಹಾಗೂ ಕೊಳವೆ ಬಾವಿಗಳ ಇಳುವರಿ ಕಡಿಮೆ ಆಗುತ್ತಿರುವುದರಿಂದ ರಾಜ್ಯದ ಕೆಲವೊಂದು ಜಿಲ್ಲೆಗಳ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿದೆ.

ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ಅಭಾವ ಎದುರಾದಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಈಗಾಗಲೇ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದಿದ್ದಾರೆ.


# ಐಪಿಎಲ್ ಪಂದ್ಯಾವಳಿ: ಚಿನ್ನಸ್ವಾಮಿ ಸ್ಟೇಡಿಯಂ ಜನಜಂಗುಳಿ ನಿಯಂತ್ರಿಸಲು ಎಐ ಬಳಕೆ

**ಬೆಂಗಳೂರು,ಮಾ.21**-ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಐಪಿಎಲ್ ಪಂದ್ಯ ನಡೆಸಲು ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್ ತೋರಿದ ಬೆನ್ನಲ್ಲೇ ಆರ್ಸಿಬಿ ಫ್ರಾಂಚೈಸಿ ಸಕಲ ರೀತಿಯಲ್ಲಿ ಸಿದ್ಧತೆ ನಡೆಸಿದೆ. ಮಾ.28ರಂದು ಆರ್ಸಿಬಿ ಹಾಗೂ ಎಸ್‌ಆರ್‌ಹೆಚ್ ತಂಡಗಳ ನಡುವೆ ಉದ್ಘಾಟನಾ ಪಂದ್ಯ ನಡೆಯಲಿದೆ.

ಆರ್‌ಸಿಬಿ ಪಂದ್ಯಕ್ಕೆ ಟಿಕೆಟ್ ಖರೀದಿ ಕುರಿತಂತೆ ಶೀಘ್ರದಲ್ಲಿ ಮಾರಾಟ ದಿನಾಂಕ ಘೋಷಿಸಲಿದೆ. ಕಾಲ್ತುಳಿತದ ಬಳಿಕ ಸುರಕ್ಷತೆಗೆ ಹೆಚ್ಚು ಒತ್ತು ನೀಡಲಾಗಿದ್ದು, ಅಭಿಮಾನಿಗಳ ಸುರಕ್ಷತೆಗಾಗಿ ಹಲವು ಮುಂಜಾಗ್ರತ ಕ್ರಮಗಳನ್ನ ಕೈಗೊಂಡಿದೆ. ಆನ್‌ಲೈನ್ ಮೂಲಕ ಶೇ.80ರಷ್ಟು ಟಿಕೆಟ್ ಮಾರಾಟ ಮಾಡಲು ಮುಂದಾಗಿದೆ. ಶೇ.20ರಷ್ಟು ಟಿಕೆಟ್‌ಗಳನ್ನು ಆಫ್ ಲೈನ್ ಮೂಲಕ ಮಾರಾಟ ಮಾಡಲು ಸಿದ್ಧತೆ ನಡೆಸಿದೆ. ಜನಜಂಗುಳಿ ತಡೆಯಲು ಟಿಕೆಟ್ ಖರೀದಿಸುವವರಿಗೆ ಮೆಟ್ರೋ ಪ್ರಯಾಣ ಉಚಿತವಾಗಿರಲಿದೆ.

ಕ್ರೀಡಾಂಗಣದ ಗರಿಷ್ಠ ಆಸನದ ಸಾಮರ್ಥ್ಯ 35 ಸಾವಿರವಿದ್ದರೂ 28 ಸಾವಿರ ಟಿಕೆಟ್‌ಗಳನ್ನು ಮಾತ್ರ ಮಾರಾಟಕ್ಕೆ ಸೀಮಿತಗೊಳಿಸಲಾಗಿದೆ. ಟಿಕೆಟ್‌ಗಳು ಪಂದ್ಯದ ಮೂರು ದಿನಗಳ ಮುಂಚೆ ಮಾತ್ರ ಲಭ್ಯವಿ ಇರಲಿವೆ. ಜನದಟ್ಟಣೆ ನಿಯಂತ್ರಿಸಲು ಮೊದಲ ಬಾರಿಗೆ ಕೃತಕ ಬುದ್ದಿ ಮತ್ತೆ (ಎಐ) ಹಾಗೂ ಡಿಜಿಟಲ್ ಕ್ಯಾಮರಾಗಳು ಬಳಕೆಯಾಗುತ್ತಿವೆ.

ಕ್ರೀಡಾಂಗಣಕ್ಕೆ ಆಗಮಿಸುವ ಕ್ರೀಡಾಭಿಮಾನಿಗಳ ನೂಕುನುಗ್ಗಲು ನಿಯಂತ್ರಿಸಲು ಎಐ ಬಳಸಲಾಗುತ್ತಿದೆ. ಸ್ಟೇಡಿಯಂನ ಯಾವುದೇ ಪ್ರವೇಶದ್ವಾರಗಳಲ್ಲಿ



ಜನದಟ್ಟಣೆ ಕಂಡುಬಂದರೆ ಹೋಲ್ಡಿಂಗ್ ಪ್ರದೇಶಗಳನ್ನು ತಕ್ಷಣ ಮುಚ್ಚಿ ಜನರನ್ನು ಸುರಕ್ಷಿತವಾಗಿ ಆಸನಗಳಿಗೆ ಕಳುಹಿಸಲು ಕ್ರಮ ಕೈಗೊಳ್ಳಲಾಗಿದೆ.

ಸ್ಟೇಡಿಯಂ ಸುತ್ತ 8 ಆಂಬ್ಯುಲೆನ್ಸ್‌ಗಳು ಇರಲಿವೆ. 10 ಸಾವಿರ ಜನರಿಗೆ ಒಂದು ಪ್ರಾಥಮಿಕ ಚಿಕಿತ್ಸಾ ಪೆಟ್ಟಿಗೆ ಇಡಲಾಗುತ್ತಿದೆ. ಚಿಕಿತ್ಸಾ ಪೆಟ್ಟಿಗೆಯು ಪ್ರತಿ 500 ಮೀಟರ್ಗಳ ಅಂತರದಲ್ಲಿ ಇರಲಿದೆ. 25 ಸಾವಿರ ಜನರಿಗೆ ಒಂದು ಅಡ್ವಾನ್ಸ್ಡ್ ಲೈಫ್ ಸಪೋರ್ಟ್ ಇರಲಿದೆ. 10 ಸಾವಿರ ಜನರಿಗೆ ಒಂದು ಬೇಸಿಕ್ ಲೈಫ್ ಸಪೋರ್ಟ್ ಆಂಬ್ಯುಲೆನ್ಸ್ ವ್ಯವಸ್ಥೆ ಕಲ್ಪಿಸಲಾಗಿದೆ.

ಆರ್‌ಸಿಬಿ ಪಂದ್ಯಗಳ ಟಿಕೆಟ್‌ಗಳನ್ನು ಅಧಿಕೃತ ವೆಬ್‌ಸೈಟ್ ಮುಖಾಂತರವೇ ಖರೀದಿಸಬೇಕು. ಥರ್ಡ್ ಪಾರ್ಟಿ ಆ್ಯಪ್ ಸೇರಿದಂತೆ ಇನ್ನಿತರ ಜಾಲತಾಣಗಳಲ್ಲಿ ಟಿಕೆಟ್ ಮಾರಾಟ ಲಭ್ಯವಿಲ್ಲ. ಟಿಕೆಟ್ ಬುಕ್ ಮಾಡುವವರು ಅಧಿಕೃತ ಜಾಲತಾಣದಲ್ಲಿ ಖರೀದಿಸಬೇಕು. ಪಂದ್ಯದ ದಿನದಂದು ಅಭಿಮಾನಿಗಳಿಗೆ ಕ್ವೀನ್ಸ್ ರಸ್ತೆ ಭಾಗದ ಪ್ರವೇಶದ್ವಾರಗಳಲ್ಲಿ ಪ್ರವೇಶ ನಿಷೇಧಿಸಲಾಗಿದ್ದು, ಬದಲಾಗಿ ಲಿಂಕ್ ರೋಡ್ ಹಾಗೂ ಕಬ್ಬನ್ ರೋಡ್ ಗೇಟ್‌ಗಳ ಮೂಲಕ ಎಂಟ್ರಿ ಪಡೆಯಬಹುದಾಗಿದೆ. ಪಂದ್ಯದ ದಿನ ವಾಹನಗಳ ಪಾರ್ಕಿಂಗ್‌ಗಾಗಿ ಗರುಡಾ ಮಾಲ್, ಸೇಂಟ್ ಜೋಸೆಫ್ ಬಾಯ್ಸ್ ಸ್ಕೂಲ್, ಸೇಂಟ್ ಜೋಸೆಫ್ ಇಂಡಿಯನ್ ಹೈಸ್ಕೂಲ್ ಹಾಗೂ ಫ್ರೀಡಂ ಪಾರ್ಕ್‌ಗಳಲ್ಲಿ ವಾಹನಗಳನ್ನು ನಿಲ್ಲಿಸಬಹುದಾಗಿದೆ ಎಂದು ಆರ್ಸಿಬಿ ಫ್ರಾಂಚೈಸಿ ತಿಳಿಸಿದೆ.

## .....ಮೊದಲನೇ ಪುಟದಿಂದ

# ಯಾವುದೇ ಧರ್ಮವೂ ದ್ವೇಷ ಬೋಧಿಸುವುದಿಲ್ಲ ಪ್ರೀತಿಯನ್ನು ಬೋಧಿಸುತ್ತವೆ-ಸಿಎಂ ಸಿದ್ದರಾಮಯ್ಯ

ಮುಸ್ಲಿಂ ಬಾಂಧವರಿಗೆ ರಂಜಾನ್ ಹಬ್ಬದ ಶುಭಗಳನ್ನು ತಿಳಿಸಿದರು. ಬಳಿಕ ಮತನಾಡಿದ ಅವರು, ಮಾನವಕುಲದ ಒಳಿತಿಗಾಗಿ ಸರ್ವರೂ ಪ್ರಾರ್ಥಿಸುವುದು ಅತ್ಯಂತ ಅವಶ್ಯ. ಮಾನವೀಯತೆಯಿಂದ ಪರಸ್ಪರ ಪ್ರೀತಿ - ವಿಶ್ವಾಸದಿಂದ ಬಾಳುವುದು ಮುಖ್ಯ. ಭಾರತ ದೇಶ ವಿವಿಧ ಜಾತಿ ಸಂಸ್ಕೃತಿಗಳಿಂದ ಕೂಡಿದೆ. ವಿವಿಧತೆಯಲ್ಲಿ ಏಕತೆಯಿರುವ ನಮ್ಮ ದೇಶದಲ್ಲಿ ಎಲ್ಲರೂ ಒಟ್ಟಾಗಿ ಬಾಳಬೇಕು.

ಯಾವುದೇ ಧರ್ಮವೂ ದ್ವೇಷವನ್ನು ಬೋಧಿಸುವುದಿಲ್ಲ. ಎಲ್ಲ ಧರ್ಮಗಳೂ ಪ್ರೀತಿಯನ್ನು ಬೋಧಿಸುತ್ತವೆ. ಇದನ್ನು ಅರಿತು ಬಾಳಿದರೆ ಸಮಾಜದಲ್ಲಿ ಶಾಂತಿ - ಸೌಹಾರ್ದತೆ ನೆಲೆಸಲು ಸಾಧ್ಯ ಎಂದು ಹೇಳಿದರು.

# ಕುರ್ವಕಲಾ ಗ್ರಾಮಕ್ಕೆ ಶಾಸಕರಾದ ಬಸನಗೌಡ ದದ್ದಲ್ ಭೇಟಿ : ಸೇತುವೆ ಕಾಮಗಾರಿ ಪರಿಶೀಲನೆ

ಸುತ್ತಲಿನ ಜಿಲ್ಲೆಗಳ ಮತ್ತು ಬೇರೆ ಬೇರೆ ರಾಜ್ಯಗಳ ಬಹಳಷ್ಟು ಭಕ್ತರು ಇಲ್ಲಿಗೆ ಆಗಮಿಸುತ್ತಾರೆ. ಹಾಗಾಗಿ ಗ್ರಾಮ ಸಂಪರ್ಕದ ಎಲ್ಲ ರಸ್ತೆಗಳು ಅಚ್ಚುಕಟ್ಟಾಗಿ ಇರಬೇಕು. ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು.

ದೇವಸ್ಥಾನದ ಅಭಿವೃದ್ಧಿಯ ಜೊತೆಗೆ ಇಲ್ಲಿಗೆ ಆಗಮಿಸುವ ಭಕ್ತರಿಗೆ ಮೂಲಭೂತ ಸೌಲಭ್ಯ ಒದಗಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಧಾರ್ಮಿಕ ಕ್ಷೇತ್ರಗಳನ್ನು ಅಭಿವೃದ್ಧಿಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂಬುದನ್ನು ಅರಿತು ಅಧಿಕಾರಿಗಳು ರಸ್ತೆ ಅಭಿವೃದ್ಧಿ, ಕುಡಿಯುವ ನೀರು ಸರಬರಾಜು, ಸಮುದಾಯ ಭವನ ನಿರ್ಮಾಣ, ಕಲ್ಯಾಣ ಮಂಟಪ ನಿರ್ಮಾಣ ಸೇರಿದಂತೆ ಅಗತ್ಯ ಅಭಿವೃದ್ಧಿ ಕಾಮಗಾರಿಗಳ ನೀಲಿನಕ್ಷೆಯನ್ನು ಕೂಡಲೇ ಸಿದ್ಧಪಡಿಸಬೇಕು ಎಂದು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಾದ ವೆಂಕಟೇಶ ಗಲಗ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ರಾಘವೇಂದ್ರ, ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ದತ್ತಾತ್ರೇಯ ಸ್ವಾಮಿಯ ದರ್ಶನ: ಗ್ರಾಮೀಣ ಪ್ರವಾಸ ಸಂದರ್ಭದಲ್ಲಿ ಶಾಸಕರು ಗ್ರಾಮಸ್ಥರೊಂದಿಗೆ ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ಕರ್ವಕಲಾ ಗ್ರಾಮದ ಆರಾಧ್ಯ ದೇವರಾದ ದತ್ತಾತ್ರೇಯ ಸ್ವಾಮಿಯ ಆಶೀರ್ವಾದ ಪಡೆದರು.

# ಸಿದ್ಧಗಂಗಾ ಮಠದ 10,000 ಮಕ್ಕಳೊಂದಿಗೆ ಸಂವಾದ ನಡೆಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು: ಸಚಿವ ವಿ. ಸೋಮಣ್ಣ

ಶಾಸಕರು ಭಾಗವಹಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಬಡವರ ಮೇಲಿನ ಕಾಳಜಿಯನ್ನು ನಾನು ನೋಡಿದ್ದೇನೆ. ಅವರು ತುಮಕೂರು ಜಿಲ್ಲೆಗೆ ಬರುತ್ತಿರುವುದು ನಮ್ಮ ಅದೃಷ್ಟ ಎಂದು ಭಾವಿಸಿದ್ದೇನೆ ಎಂದೂ ಸಚಿವರು ಹೇಳಿದರು.

ದಾಸೋಹದ ದಿನ ಎಂದು ಘೋಷಣೆ ಮಾಡುವ ಸಲುವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದು ಪತ್ರ ಬರೆಯಲಿದ್ದೇನೆ. ಸಾಧ್ಯವಾದರೆ ಎಪ್ರಿಲ್ 1ನೇ ತಾರೀಖಿನ ಒಳಗೆ ಆದಷ್ಟು ಬೇಗ ಗೆಜೆಟ್ ನೋಟಿಫಿಕೇಶನ್ ಹೊರಡಿಸುವಂತೆ, ಇದೊಂದು ಪುಣ್ಯದ ಕೆಲಸವಾಗಿದೆ ಎಂದು ಮನವರಿಕೆ ಮಾಡಿಕೊಡುತ್ತೇನೆ ಎಂದು ಸಚಿವರು ಪ್ರತಕ್ರಿಯಿಸಿದರು.

ಮುಂದುವರೆದು, ತುಮಕೂರಿನ ರೈಲ್ವೆ ನಿಲ್ದಾಣಕ್ಕೆ ಸಿದ್ದಗಂಗಾ ಮಠದ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಹೆಸರನ್ನು ನಾಮಕರಣ ಮಾಡಬೇಕು ಎಂಬ ಕುರಿತು ಈಗಾಗಲೇ ಆ ಕೆಲಸ ಪ್ರಾರಂಭವಾಗಿದೆ. ಮುಂದಿನ ವರ್ಷ ಎಪ್ರಿಲ್ ಒಂದರ ಒಳಗೆ ಪೂರ್ಣಗೊಳಿಸಬೇಕು ಕಾಮಗಾರಿಗಳನ್ನು ಎಂಬ ಅಭಿಲಾಷೆ ಹೊಂದಿದ್ದೇನೆ ಎಂದರು.

ನನಗೆ ದೇಶ ಎಂದರೆ ಮೋದಿ, ಮೋದಿ ಎಂದರೆ ಅಭಿವೃದ್ಧಿ. ಪ್ರಧಾನಿ ಮೋದಿ ಅವರು ದೇಶಕ್ಕೆ ವಿವಿಧ ರೀತಿಯಲ್ಲಿ ಅಭಿವೃದ್ಧಿ ಪರವಾದ ನಾಮಭಾರತ್ ಸೇರಿದಂತೆ ಅನೇಕ ಯೋಜನೆಗಳನ್ನು ಪರಿಚಯಿಸುತ್ತಿದ್ದಾರೆ. ಅದರಲ್ಲಿ ತುಮಕೂರು ಜಿಲ್ಲೆಯು ಕೂಡ ಸೇರ್ಪಡೆಗೊಳಿಸಬೇಕೆಂಬ ಅಭಿಲಾಷೆ ನಾನು ಹೊಂದಿದ್ದೇನೆ. ಅವರಿಗೆ ಮನವರಿಕೆ ಮಾಡಿಕೊಡುತ್ತಿದ್ದೇನೆ ಎಂದು ಉತ್ತರಿಸಿದರು.

ಕೊನೆಗೆ, ಇತ್ತೀಚಿಗೆ ತುಮಕೂರು ಜಿಲ್ಲೆ ಹುಳಿಯಾರ್ ಪೊಲೀಸ್ ಠಾಣೆಯಲ್ಲಿ ಆರೋಪಿಯೊರ್ವ ಮೃತಪಟ್ಟ ಪ್ರಕರಣಕ್ಕೆ ಸಂಬಂಧಪಟ್ಟಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರು ನನ್ನ ಗಮನಕ್ಕೆ ತಂದಿದ್ದಾರೆ. ಈ ಘಟನೆ ಆಗಬಾರದಿತ್ತು, ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಹೇಳಿದರು.

# ಅರಕೇರಾ ಗ್ರಾಮದ ಬಳಿ ಚಿರತೆ ಕಾಟಕರು ಹೊತ್ತುಯ್ಯದು ಆತಂಕ

ಆತಂಕ ಮನೆ ಮಾಡಿತ್ತು. ಇತ್ತೀಚೆಗೆ ಮೂರು ನಾಲ್ಕು ಆಕಳುಗಳನ್ನು ತಿಂದಿದ್ದು, ಚಿರತೆಯ ಹಾವಳಿ ಹೆಚ್ಚಾಗಿದೆ. ಇದರಿಂದ ಗ್ರಾಮಸ್ಥರಿಗೆ ಜಮೀನುಗಳಿಗೆ ಹೋಗಲು ಭಯ ಕಾಡುತ್ತಿದೆ. ಅಲ್ಲದೆ ಸಾಕುಪ್ರಾಣಿಗಳ ಮೇಲೆ ಚಿರತೆ ದಾಳಿ ನಡೆಸುತ್ತಿದ್ದು ಜಾನುವಾರು ಸಾಕಿದವರಿಗೆ ಭಯವಾಗುತ್ತಿದೆ.

ನಿಂಗನದೊಡ್ಡಿ.ಬಂಡೆಗುಡ್ಡ ಗೊಲುಗುಡ್ಡ ಸೇರಿದಂತೆ ಮೂರು ಕಡೆ ಗವಿಗಳಿವೆ. ರಾತ್ರಿವೇಳೆ ಈ ಗವಿಗಳಲ್ಲಿ ವಾಸಮಾಡುತ್ತದೆ. ಗುಡ್ಡದ ಸಮೀಪದಲ್ಲಿರುವ ಜಮೀನುಗಳಲ್ಲಿ ಬ್ಯಾರಲ್‌ಗಳಲ್ಲಿ ಜಾನುವಾರುಗಳಿಗೆ ಕುಡಿಯುವ ನೀರಿನ ಸಲುವಾಗಿ ತುಂಬಿದ ಬ್ಯಾರಲುಗಳಲ್ಲಿ ನೀರು ಕುಡಿದು ಹೊಗುತ್ತದೆ.

ಗ್ರಾಮದಲ್ಲಿ ಚಿರತೆಗಳು ದಾಳಿ ಮಾಡಿ ಬೀದಿ ನಾಯಿ ಮತ್ತು ಜಾನುವಾರುಗಳನ್ನು ಎಳೆದೊಯ್ದು ತಿಂದು ಹಾಕುತ್ತಿರುವ ಘಟನೆಗಳು ಹೆಚ್ಚುತ್ತಿದೆ. ಹೀಗಾಗಿ ರೈತರು ಮತ್ತು ಕೃಷಿ ಕಾರ್ಮಿಕರು ಜಮೀನುಗಳಿಗೆ ತೆರಳಲು ಭಯಪಡುತ್ತಿದ್ದಾರೆ. ಜನರಲ್ಲಿ ಚಿರತೆ ಭಯವನ್ನು ನಿವಾರಣೆ ಮಾಡಲು ಪ್ರಾದೇಶಿಕ ಅರಣ್ಯಾಧಿಕಾರಿಗಳು ಕ್ರಮ ಕೈಗೊಳ್ಳಬೇಕು.ಎಂದು ಶಿವಗೇನಿ ನಾಯಕ ಗುಜುಪು ಮನವಿ ಮಾಡಿದ್ದಾರೆ.

# ಪೆಟ್ರೋಲ್ - ಡೀಸೆಲ್ ಬೆಲೆಯಲ್ಲಿ ಏರಿಕೆಯ ವದಂತಿ, ಬಸ್ ಟಿಕೆಟ್ ದರ ಹೆಚ್ಚಾಗುತ್ತಾ? ಸಚಿವ ರಾಮಲಿಂಗಾರೆಡ್ಡಿ

ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ರಾಮಲಿಂಗಾರೆಡ್ಡಿ, ಹಿಂದಿನ ದಿನಗಳಲ್ಲಿ ಕಚ್ಚಾ ತೈಲದ ಬೆಲೆ ಕಡಿಮೆಯಾಗಿದ್ದಾಗಲೂ ಕೇಂದ್ರ ಸರ್ಕಾರ ಜನರಿಗೆ ಯಾವುದೇ ಪ್ರಯೋಜನವನ್ನು ತಲುಪಿಸಲಿಲ್ಲ ಎಂದು ಆರೋಪಿಸಿದರು. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ 100–130 ಡಾಲರ್ ಇದ್ದ ಕಚ್ಚಾ ತೈಲಕ್ಕೆ ಸಬ್ಸಿಡಿ ನೀಡಲಾಗಿತ್ತು. ಆದರೆ, ಆ ನಂತರದ 10–12 ವರ್ಷಗಳ ಕಾಲ ಕಚ್ಚಾ ತೈಲ ಬೆಲೆ ಕಡಿಮೆಯಾಗಿದ್ದಾಗಲೂ ಕೇಂದ್ರ ಸರ್ಕಾರ ಲಾಭ ಮಾಡಿಕೊಂಡಿತೇ ಹೊರತು ಜನರಿಗೆ ಇದರ ಲಾಭ ಸಿಗಲಿಲ್ಲ ಎಂದು ಹೇಳಿದರು.

# ಜೀವಾವಧಿ ಶಿಕ್ಷೆಗೆ ಗುರಿಯಾದ ವ್ಯಕ್ತಿಯನ್ನು 20 ವರ್ಷಗಳ ಬಳಿಕ ಬಿಡುಗಡೆ ಮಾಡಬೇಕು ಎಂಬ ಪ್ರಶ್ನೆ ಉದ್ಭವಿಸುವುದಿಲ್ಲ : ಹೈಕೋರ್ಟ್

**ಬೆಂಗಳೂರು,ಮಾ.21**–ಅಪರಾಧಿಗೆ ಜೀವಾವಧಿ ಶಿಕ್ಷೆ ವಿಧಿಸುವ ಸಂದರ್ಭದಲ್ಲಿ, ಶಿಕ್ಷೆಯ ಅವಧಿ ಯ ಕುರಿತು ಯಾವುದೇ ಉಲ್ಲೇಖವಿಲ್ಲದ ಸಂದರ್ಭದಲ್ಲಿ 20 ವರ್ಷ ಜೈಲು ಶಿಕ್ಷೆ ಪೂರೈಸಿದ ಬಳಿಕ ಸ್ವಯಂಚಾಲಿತವಾಗಿ ಬಿಡುಗಡೆ ಮಾಡಬೇಕು ಎಂಬ ಪ್ರಶ್ನೆ ಉಂಟಾಗುವುದಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಮೈಸೂರು ಕಾರಾಗೃಹದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಬೆಂಗಳೂರಿನ ಕೋರ ಮಂಗಲದ ಕಿಶನ್ ಸಲ್ಲಿಸಿದ್ದ ಅರ್ಜಿಯ ವಿಚಾ ರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂ ದರಾಜು ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ಅಲ್ಲದೇ, ಜೀವಾವಧಿ ಶಿಕ್ಷೆ ವಿಧಿಸುವ ಸಂದರ್ಭದಲ್ಲಿ ನ್ಯಾಯಾಲಯಗಳು ಶಿಕ್ಷೆಯ ಅವಧಿಯನ್ನು ನಿರ್ಬಂಧಿಸುವ ಸಂಬಂಧ ನ್ಯಾಯಾಲಯದಿಂದ ಯಾವುದೇ ನಿರ್ದಿಷ್ಟ ನಿರ್ದೇಶನವಿಲ್ಲದಿದ್ದಲ್ಲಿ, ಅದನ್ನು ಜೀವಿತಾವಧಿ ಶಿಕ್ಷೆ ಎಂದು ತಿಳಿದುಕೊಳ್ಳಬೇಕು. ಅಲ್ಲದೆ, ಅಪರಾಧಿಯು 20 ವರ್ಷ ಶಿಕ್ಷೆ ಪೂರೈಸಿದ ಬಳಿಕ ಜೀವಾವಧಿ ಶಿಕ್ಷೆಗೆ ಗುರಿಯಾದವನನ್ನು ಬಿಡುಗಡೆ ಮಾಡಬಹುದು ಎಂದು ಐಪಿಸಿ ಸೆಕ್ಷನ್ 57 ಹೇಳುವುದಿಲ್ಲ. ಆದರೆ, ಕ್ಷಮಾದಾನ ಅಥವಾ ಅವಧಿಗೂ ಮುನ್ನ ಅಪರಾಧಿಯನ್ನು ಬಿಡುಗಡೆ ಮಾಡುವ ಸಂಬಂಧ ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಳ್ಳಬಹುದಾಗಿದೆ ಎಂದು ಪೀಠ ಹೇಳಿದೆ. ಕಾನೂನಿನ ಅಡಿ ಪರಿವರ್ತನೆ ಅಥವಾ ಕ್ಷಮಾದಾನ ಸಿಗದ ಹೊರತು, ಜೈಲು ಶಿಕ್ಷೆಯನ್ನು ಸೀಮಿತಗೊಳಿಸುವ ನಿರ್ದಿಷ್ಟ ನ್ಯಾಯಾಂಗ ನಿರ್ದೇಶನದ ಗೈರಿನ ಹಿನ್ನೆಲೆಯಲ್ಲಿ ಅರ್ಜಿದಾರರಿಗೆ ವಿಧಿಸಿರುವ ಜೀವಾವಧಿ ಶಿಕ್ಷೆಯನ್ನು ಬದುಕಿರುವವರೆಗಿನ ಶಿಕ್ಷೆ ಎಂದು ಪರಿಗಣಿಸಬೇಕಾಗುತ್ತದೆ ಎಂದು ಪೀಠ ತನ್ನ ಆದೇಶದಲ್ಲಿ ಹೇಳಿದೆ.

ಪ್ರಕರಣದಲ್ಲಿ ಅರ್ಜಿದಾರರಾಗಿರುವ ಅಪರಾಧಿ, 20 ವರ್ಷ ಜೈಲು ಶಿಕ್ಷೆ ಅನುಭವಿಸಿರುವುದರಿಂದ ಸರ್ಕಾರಕ್ಕೆ ಕ್ಷಮಾದಾನ ಕೋರಿಕೆ ಸಲ್ಲಿಸಲು ಅರ್ಹರಾಗಿದ್ದಾರೆ. ರಾಜ್ಯ ಸರ್ಕಾರ ಕ್ಷಮಾದಾನ ನೀತಿ ಮತ್ತು ಸೂಕ್ತ ಶಾಸನಬದ್ಧ ನಿಬಂಧನೆಗಳ ಅಡಿ ಕ್ಷಮಾದಾನ ಕೋರಬಹುದಾಗಿದೆ. ಇಂಥ ಅರ್ಜಿಯನ್ನು ಸಲ್ಲಿಸಿದರೆ ಸೂಕ್ತ ಸರ್ಕಾರ/ಶಿಕ್ಷೆ ಪರಿಶೀಲನಾ ಮಂಡಳಿಯು ಪ್ರಕರಣದ ಆಧಾರದ ಮೇಲೆ ಅಪರಾಧಿಯು ಶಿಕ್ಷೆ ಅನುಭವಿಸಿರುವ ಅವಧಿ, ಅರ್ಜಿದಾರನ ನಡತೆ, ಅಪರಾಧದ ಸ್ವರೂಪ, ಸಂತ್ರಸ್ತರ ಹಿತಾಸಕ್ತಿ ಮತ್ತು ಅನ್ವಯಿಸುವ ನೀತಿಯನ್ನು ಪರಿಗಣಿಸಿ ನಿರ್ಧರಿಸಬಹುದಾಗಿದೆ ಎಂದು ಪೀಠ ತನ್ನ ಆದೇಶದಲ್ಲಿ ವಿವರಿಸಿದೆ.

ಪ್ರಕರಣದ ಹಿನ್ನೆಲೆ : ಇಬ್ಬರು ಮಕ್ಕಳನ್ನು ಅಪಹರಿಸಿ ಕೊಲೆ ಮಾಡಿದ ಪ್ರಕರಣದಲ್ಲಿ ಅರ್ಜಿದಾರ ಕಿಶನ್ ಸೇರಿ ಮೂವರಿಗೆ ಬೆಂಗಳೂರಿನ ಸೆಷನ್ಸ್ ನ್ಯಾಯಾಲಯ ಪ್ರಾರಂಭದಲ್ಲಿ ಮರಣದಂಡನೆ ವಿಧಿಸಿತ್ತು.

ಈ ಪ್ರಕರಣದ ಮೇಲ್ಮನವಿ ಪ್ರಕ್ರಿಯೆಯು 2013ರಲ್ಲಿ ಪೂರ್ಣಗೊಂಡಿದ್ದು, ಹೈಕೋರ್ಟ್ ಮರಣದಂಡನೆ ಶಿಕ್ಷೆಯನ್ನು ಜೀವಾವಧಿ ಶಿಕ್ಷೆಯನ್ನಾಗಿ ಪರಿವರ್ತಿಸಿತ್ತು. ಐಪಿಸಿ ಸೆಕ್ಷನ್ 57ರ ಅಡಿ 14 ವರ್ಷ ಜೈಲು ಶಿಕ್ಷೆ ಪೂರ್ಣಗೊಂಡ ಬಳಿಕ ಶಿಕ್ಷೆಯ ಅವಧಿಯಲ್ಲಿ ಯಾವುದೇ ಕಡಿತ ಇರುವುದಿಲ್ಲ ಎಂಬ ಸ್ಪಷ್ಟ ನಿರ್ದೇಶನವನ್ನೂ ನ್ಯಾಯಾಲಯ ನೀಡಿತ್ತು. 2025ರ ಜನವರಿ 15ರಂದು 20 ವರ್ಷ ಶಿಕ್ಷೆ ಪೂರೈಸಿದ್ದ ಕಿಶನ್, ಐಪಿಸಿ ಸೆಕ್ಷನ್ 57ರ ಅಡಿ ಕ್ಷಮಾದಾನಕ್ಕೆ ಅರ್ಹವಾಗಿರುವುದರಿಂದ ಬಿಡುಗಡೆ ಮಾಡುವಂತೆ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ಅನಿಲ್ ಕುಂಬ್ಳೆ ಸರ್ಕಲ್ ನಲ್ಲಿ ಹೈಟೆಕ್ ಕಾರ್ ಡ್ರಿಫ್ಟಿಂಗ್ ಅಪರಿಚಿತ ಚಾಲಕನ ವಿರುದ್ಧ ಪ್ರಕರಣ ದಾಖಲು

**ಬೆಂಗಳೂರು,ಮಾ.21**– ಎಂ.ಜಿ. ರಸ್ತೆಯ ಅನಿಲ್ ಕುಂಬ್ಳೆ ಸರ್ಕಲ್ ಬಳಿ ಇಂದು ಬೆಳಗಿನಜಾವ ಐಷಾರಾಮಿ ಲಾಂಬೋರ್ಗಿನಿ ಕಾರು ಡ್ರಿಫ್ಟಿಂಗ್ ಮಾಡಿ ಅಪಾಯಕಾರಿ ಚಾಲನೆ ಮಾಡಿದ್ದು, ಈ ಸಂಬಂಧ ಅಪರಿಚಿತ ಕಾರು ಚಾಲಕನ ವಿರುದ್ಧ ಕಬ್ಬನ್ ಪಾರ್ಕ್ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇಂದು ಬೆಳಗಿನಜಾವ 2 ಗಂಟೆ ಸುಮಾರಿಗೆ ಲಾಂಬೋರ್ಗಿನಿ ಕಾರು ಅನಿಲ್ ಕುಂಬ್ಳೆ ವೃತ್ತದ ಬಳಿ ಬಂದಿತ್ತು. ಈ ವೇಳೆ ಕಾರು ಡ್ರಿಫ್ಟಿಂಗ್ ಮಾಡಿದೆ. ಇದನ್ನು ಕಂಡು ಸ್ಥಳೀಯರು ಮೊಬೈಲ್‌ನಲ್ಲಿ ಚಿತ್ರೀಕರಿಸಿಕೊಂಡು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದರು. ಮಾಹಿತಿ ಆಧರಿಸಿ ಕಬ್ಬನ್ ಪಾರ್ಕ್ ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಸಿಸಿಟಿವಿ ಪರಿಶೀಲನೆ ವೇಳೆ ಓಅ-05 ಫ್ಕ 0009 ನಂಬರ್ನ ಲ್ಯಾಂಬೋರ್ಗಿನಿ ಕಾರು ಎಂಬುದು ಗೊತ್ತಾಗಿದೆ. ಕಾರಿನ ಮಾಲೀಕರನ್ನು ಪತ್ತೆ ಮಾಡಲಾಗುತ್ತಿದ್ದು, ಅಜಾಗರೂಕತೆ ಹಾಗೂ ಅಪಾಯಕಾರಿ ಚಾಲನೆಯಡಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಈ ಬಗ್ಗೆ ಪಶ್ಚಿಮ ವಿಭಾಗದ ಸಂಚಾರ ಪ್ರಭಾರ ಡಿಸಿಪಿ ಸಾಹಿಲ್ ಬಾಂಗ್ಲಾ ಪ್ರತಿಕ್ರಿಯಿಸಿ, ಬೆಳಗಿನಜಾವ 2 ರಿಂದ 3ಗಂಟೆ ಸುಮಾರಿಗೆ ಕಾರು ಡ್ರಿಫ್ಟಿಂಗ್ ಮಾಡಿರುವುದು ಸಿಸಿಟಿವಿಯಲ್ಲಿ ಸೆರೆಯಾಗಿದೆ. ಸದ್ಯ ಕಾರಿನ ಮಾಲೀಕರು ಯಾರು ಎಂಬುದರ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. ಅಪಾಯಕಾರಿಯಾಗಿ ವಾಹನ ಚಾಲನೆ ಮಾಡುವಂತಿಲ್ಲ. ಪ್ರಕರಣ ಸಂಬಂಧ ಆರ್.ಸಿ ರದ್ದು ಮಾಡಲು ಆರ್ಟಿಒಗೆ ಪತ್ರ ಬರೆದು ಶಿಫಾರಸು ಮಾಡಲಾಗುವುದು ಎಂದು ಡಿಸಿಪಿ ತಿಳಿಸಿದ್ದಾರೆ.

ಏನಿದು ಕಾರ್ ಡ್ರಿಫ್ಟಿಂಗ್? ಕಾರ್ ಡ್ರಿಫ್ಟಿಂಗ್ ಎಂಬುದು ವಾಹನದ ಹಿಂದಿನ ಚಕ್ರಗಳ ಹಿಡಿತವನ್ನು ಉದ್ದೇಶಪೂರ್ವಕವಾಗಿ ತಪ್ಪಿಸಿ, ತಿರುವುಗಳಲ್ಲಿ ನಿಯಂತ್ರಿತ ರೀತಿಯಲ್ಲಿ ಜಾರುವಂತೆ ಮಾಡುವ ಸಾಹಸಮಯ ಚಾಲನಾ ತಂತ್ರವಾಗಿದೆ. ಈ ಕಲೆಗೆ ಹೆಚ್ಚಿನ ಕೌಶಲ್ಯದ ಅಗತ್ಯವಿದೆ. ವೇಗ, ನಿಯಂತ್ರಣ ಮತ್ತು ಕೌಶಲ್ಯವನ್ನು ಪ್ರದರ್ಶಿಸುವ ಮೋಟಾರ್‌ಸ್ಪೋರ್ಟ್ ಆಗಿದೆ.

ಹೆಲ್ಮೆಟ್ ಧರಿಸದೇ ತ್ರಿಬಲ್ ರೈಡಿಂಗ್, ರೀಲ್ಸ್ ಮಂಜುಗೆ ಫೈನ್(ಪ್ರತ್ಯೇಕ ಘಟನೆ): ಸಾಮಾಜಿಕ ಜಾಲತಾಣಗಳಲ್ಲಿ ವಿಚಿತ್ರವಾಗಿ ರೀಲ್ಸ್ ಮಾಡುತ್ತಿದ್ದ, ಮಂಜಣ್ಣ ಅಂತಾನೇ ಕರೆಸಿಕೊಳ್ಳುವ ಮಂಜು ಬೈಕ್‌ನಲ್ಲಿ ತ್ರಿಬಲ್ ರೈಡ್ ಮಾಡಿದ ತಪ್ಪಿಗೆ ಫೈನ್ ಕಟ್ಟಿದ್ದರು. ದೊಡ್ಡಬಳ್ಳಾಪುರದ ಈ ಮಂಜುನಾಥ್ ರೀಲ್ಸ್ ವಿಡಿಯೋ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಪರಿಚಿತರಾಗಿದ್ದಾರೆ, ಬನ್ರೋ ಎನ್ನುವ ಮೂಲಕ ಪ್ರಸಿದ್ದಿರಾಗಿದ್ದಾರೆ. ಇದೇ ಒಂದು ರೀಲ್ಸ್ ವಿಡಿಯೋ ಮಾಡಿದ್ದಕ್ಕಾಗಿ ಪೊಲೀಸರು ಫೈನ್ ಹಾಕಿದ್ದರು.

ರೀಲ್ಸ್ ಮಾಡುವ ಇಬ್ಬರು ಮಹಿಳೆಯರ ಜೊತೆಯಲ್ಲಿ ಬೈಕ್ ರೈಡಿಂಗ್ ಮಾಡಿದ ವಿಡಿಯೋವನ್ನು ಹಂಚಿಕೊಂಡಿದ್ದರು, ಸಂಚಾರಿ ನಿಯಮ ಉಲ್ಲಂಘನೆ ಮಾಡಿ ತ್ರಿಬಲ್ ರೈಡಿಂಗ್ ಜೊತೆಗೆ, ಹೆಲ್ಮೆಟ್ ಧರಿಸದೇ ಇರುವುದು ಪೊಲೀಸರ ಗಮನಕ್ಕೆ ಬಂದಿದೆ, ರೀಲ್ಸ್ ಮಂಜನನ್ನು ಪತ್ತೆ ಮಾಡಿದ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸರು, ಠಾಣೆಗೆ ಕರೆತಂದು ಫೈನ್ ಹಾಕಿ ಕಳುಹಿಸಿದ್ದರು.

# ಕೃತಕ ಬುದ್ಧಿಮತ್ತೆಯು ನ್ಯಾಯದಾನದಲ್ಲಿ ಪ್ರಮುಖ ಪಾತ್ರ ವಹಿಸಲಿದೆ-ಸಿಜೆಐ ಸೂರ್ಯಕಾಂತ್



**ಬೆಂಗಳೂರು,ಮಾ.21**–ಕೃತಕ ಬುದ್ಧಿಮತ್ತೆಯು ನ್ಯಾಯದಾನದಲ್ಲಿ ಪ್ರಮುಖ ಪಾತ್ರ ವಹಿಸಲಿದ್ದು, ಕಕ್ಷಿದಾರರಿಗೆ ಅರ್ಜಿ ಸಲ್ಲಿಸಿದ ದಿನದಿಂದ ಅದರ ಅಂತಿಮ ಆದೇಶದವರೆಗೂ ಎಲ್ಲ ಹಂತದ ಪ್ರಕ್ರಿಯೆಗಳ ಕುರಿತು ಸಂಪೂರ್ಣ ವಿವರಣೆ ನೀಡಲು ನೆರವಾಗಲಿದೆ ಎಂದು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ತಿಳಿಸಿದರು.

ಕೃತಕ ಬುದ್ಧಿ ಮತ್ತೆ - ವ್ಯಾಜ್ಯಗಳ ತಡೆಗಟ್ಟುವಿಕೆ ಮತ್ತು ಇತ್ಯರ್ಥ ಎಂಬ ವಿಷಯದ ಕುರಿತು ಕರ್ನಾಟಕ ನ್ಯಾಯಾಂಗ ಅಕಾಡೆಮಿಯ ಸಭಾಂಗಣದಲ್ಲಿ ಯುಐಎ ಇಂಡಿಯಾ ಅಧ್ಯಾಯ, ಬಾರ್ ಅಸೋಸಿಯೇಷನ್ ಆಫ್ ಇಂಡಿಯಾ, ಕರ್ನಾಟಕ ನ್ಯಾಯಾಂಗ ಅಕಾಡೆಮಿ ಮತ್ತು ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಏರ್ಪಡಿಸಿದ್ದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ನ್ಯಾಯಾಂಗ ಕ್ಷೇತ್ರದಲ್ಲಿನ ಮಾಹಿತಿ, ತಿಳಿದುಕೊಳ್ಳುವುದು, ತಂತ್ರಜ್ಞಾನದ ಅಳವಡಿಕೆ ಸೇರಿದಂತೆ ಕಾನೂನು ಪದವೀಧರರಿಗೆ ನ್ಯಾಯಾಂಗ ವ್ಯವಸ್ಥೆಯಲ್ಲಿ ಭಾಗಿಯಾಗಲು ನೆರವಾಗಲಿದೆ. ನ್ಯಾಯ ವಿತರಣಾ ವ್ಯವಸ್ಥೆಯಲ್ಲಿ ಪ್ರಮುಖ ಸಾಧನವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ಹೇಳಿದರು.

ಅಗಾಧ ಪ್ರಮಾಣದ ದತ್ತಾಂಶ-ದಾಖಲಾತಿಗಳನ್ನು ನಿರ್ವಹಿಸಲು, ಮಾದರಿಗಳನ್ನು ಗುರುತಿಸಲು, ಪ್ರಕ್ರಿಯೆಗಳ ವಿಳಂಬವನ್ನು ತಗ್ಗಿಸಲು ಎಐ ಸಹಾಯಕವಾಗಬೇಕು. ಆದರೆ, ಪ್ರಧಾನ ಕಾರ್ಯವಾದ ತೀರ್ಪು ಪ್ರಕಟಿಸುವಿಕೆಯನ್ನೇ ಅದು ಅತಿಕ್ರಮಿಸುವಂತಾಗಬಾರದು.

ತೀರ್ಪು ಪ್ರಕಟಿಸುವಿಕೆಯ ಹಂತದ ಮೇಲೆ ಎಐ ಸಾಧನಗಳಿಗೆ ಹಿಡಿತ ಸಾಧಿಸಲು ಆಸ್ಪದ ಮಾಡಿಕೊಟ್ಟರೆ ಪಾರದರ್ಶಕವಲ್ಲದ ಹಾಗೂ ಉತ್ತರದಾ ಯಿಯಲ್ಲದ ವ್ಯವಸ್ಥೆ ನಿರ್ಮಾಣವಾಗಲು ನಾವು ಅವಕಾಶ ಮಾಡಿಕೊಟ್ಟಂತಾಗುತ್ತದೆ. ನ್ಯಾಯಾಂಗ ವ್ಯವಸ್ಥೆಗೆ ಎಐ (ಕೃತಕ ಬುದ್ಧಿಮತ್ತೆ) ತಾಂತ್ರಿಕತೆಯನ್ನು ಸಂಯೋಜನೆಗೊಳಿಸುವಾಗ ಅದು ವ್ಯವಸ್ಥೆಯನ್ನು ಮತ್ತಷ್ಟು ಸದೃಢಗೊಳಿಸುವ ರೀತಿಯಲ್ಲಿ ಇರಬೇಕು. ಬದಲಿಗೆ ನ್ಯಾಯಾಂಗದ ಮೇಲೆ ಸವಾರಿ ಮಾಡುವಂತಿರಬಾರದು ಎಂದು ಸೂರ್ಯಕಾಂತ್ ಎಚ್ಚರಿಸಿದರು.

ನ್ಯಾಯಾಂಗ ಪ್ರಕ್ರಿಯೆಯ ಅಂತಿಮ ಘಟ್ಟವಾದ ತೀರ್ಪು ಪ್ರಕಟಿಸುವಿಕೆಯಲ್ಲಿ ಮನುಷ್ಯರೇ ನಿರ್ಣಾಯಕ ಪಾತ್ರ ವಹಿಸುವಂತಿರಬೇಕು. ಅಂದರೆ, ನ್ಯಾಯಮೂರ್ತಿಗಳು ಮತ್ತು ನ್ಯಾಯಾಧೀಶರುಗಳೇ ತರ್ಕ ಶಕ್ತಿ ಹಾಗೂ ಅನುಭವಗಳ ವಿಶ್ಲೇಷಣೆಯ ಬೆಳಕಿನಲ್ಲಿ ತೀರ್ಪುಗಳನ್ನು ಪ್ರಕಟಿಸಬೇಕು. ನ್ಯಾಯಾಂಗ ವ್ಯವಸ್ಥೆಯಲ್ಲಿ ಎಐ ತರುವ ಪ್ರಯೋಜನಗಳು ಮಾರ್ಗಗಳಾಗಿ ಮಾತ್ರವೇ ಬಳಕೆಯಾಗಬೇಕು. ಆದರೆ, ಯಾವ ದಿಕ್ಕಿನತ್ತ ಸಾಗಬೇಕು ಎಂಬ ದಿಕ್ಸೂಚಿಯ ಪಾತ್ರವನ್ನು ಮನುಷ್ಯನ ಬುದ್ಧಿಯೇ ನಿರ್ಧರಿಸಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು ಗೌರವ ಅತಿಥಿಯಾಗಿ ಮಾತನಾಡಿ, ನ್ಯಾಯಾಂಗ ವ್ಯವಸ್ಥೆಯನ್ನು ಎಐ ಪ್ರವೇಶಿಸಿರುವ ಈ ಸಂದರ್ಭದಲ್ಲಿ, ಮನುಷ್ಯನ ನಿರ್ಧಾರ ತಳೆಯುವ ಶಕ್ತಿಗೆ ಎಐ ಸಹಾಯಕನಂತೆ ವರ್ತಿಸುತ್ತಿದೆಯೇ ಅಥವಾ ಮನುಷ್ಯನ ಉಪಸ್ಥಿತಿಯ ಅಗತ್ಯವೇ ಇಲ್ಲದ ಪರ್ಯಾಯದಂತೆ ಗೋಚರಿಸುತ್ತಿದೆಯೇ?, ಇದು ಜನರಿಗೆ ನ್ಯಾಯಿಕ ವ್ಯವಸ್ಥೆಯನ್ನು ಇನ್ನಷ್ಟು ಸುಲಭವಾಗಿ ಲಭ್ಯವಾಗಿಸುತ್ತದೆಯೇ ಅಥವಾ, ಹೊಸ ಸ್ವರೂಪದ ಅಸಮಾನತೆಗಳನ್ನು ಹಾಗೂ ಅಪಾರದ ರ್ಶಕತೆಯನ್ನು ಉಂಟುಮಾಡುತ್ತದೆಯೇ? ಎಂಬಂತಹ ಪ್ರಮುಖ ಪ್ರಶ್ನೆಗಳು ಈಗ ಎದುರಾಗಿವೆ ಎಂದರು.

ಎಐ ತಾಂತ್ರಿಕತೆಯಿಂದ ಕೆಲವು ಕ್ರಾಂತಿಕಾರಿ ಪ್ರಯೋಜನಗಳು ಕೂಡ ಆಗುತ್ತಿವೆ. ಮಾದರಿಗಳ ವಿಶ್ಲೇಷಣೆಯನ್ನು ಸಾಧ್ಯವಾಗಿಸುವ ಮೂಲಕ ಭವಿಷ್ಯದಲ್ಲಿ ತಲೆದೋರಬಹುದಾದ ವ್ಯಾಜ್ಯಗಳನ್ನು ಎಐ ನೆರವಿನಿಂದ ಮುಂಚಿತವಾಗಿಯೇ ಊಹಿಸುವುದು ಸಾಧ್ಯವಾಗಿದೆ. ಇದರಿಂದ ನ್ಯಾಯಾಂಗ ವ್ಯವಸ್ಥೆಯ ದಕ್ಷತೆ ಹೆಚ್ಚಲಿದೆ. ಎಐ ಬೆಂಬಲಿತ ಆನ್ ಲೈನ್ ಡಿಸ್ಪ್ಯೂಟ್ ರೆಸಲ್ಯೂಷನ್ ವೇದಿಕೆಯಿಂದಾಗಿ ಕಡಿಮೆ ಖರ್ಚಿನಲ್ಲಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಅನುಕೂಲವಾಗಲಿದೆ. ರಾಜಿ ಸಂಧಾನಗಳ ಮೂಲಕ ವ್ಯಾಜ್ಯಗಳನ್ನು ಇತ್ಯರ್ಥಗೊಳಿಸುವುದಕ್ಕೂ ಇದು ಸಹಾಯಕವಾಗಲಿದೆ ಎಂದು ಅವರು ಹೇಳಿದರು.

ನ್ಯಾಯಾಂಗ ಸ್ವಾತಂತ್ರ್ಯ, ಪಾರದರ್ಶಕತೆ ಹಾಗೂ ಕಾನೂನುಬದ್ಧತೆಯ ಅಂಶಗಳು ಈಗ ಅತ್ಯಂತ ಪ್ರಮುಖವಾಗಿ ಪರಿಣಮಿಸಿವೆ. ನ್ಯಾಯಾಂಗ ಪ್ರಕ್ರಿಯೆಗಳಲ್ಲಿ ಎಐ ಬಳಕೆಯು ಸ್ಪಷ್ಟವಾಗಿ ವ್ಯಾಖ್ಯಾನಿಸಲಾದ ತತ್ತ್ವಗಳು ಹಾಗೂ ಸೂಕ್ತ ರಕ್ಷಣೆಗಳೊಂದಿಗೆ ನಿರ್ದೇಶಿತವಾಗಬೇಕು. ವಕೀಲರು ಕೂಡ ಎಐ ಟೂಲ್‌ಗಳ ಮಿತಿಯನ್ನು ಅರ್ಥ ಮಾಡಿಕೊಳ್ಳಬೇಕು. ನ್ಯಾಯಾಂಗ ವ್ಯವಸ್ಥೆಯ ಪ್ರಧಾನ ಘಟಕಗಳಾದ ಪ್ರಾಮಾಣಿಕತೆ ಮತ್ತು ಜವಾಬ್ದಾರಿಗಳು ಅಬಾಧಿತವಾಗಿ ಮುಂದುವರಿಯಬೇಕು ಎಂದರು.

ಬಾರ್ ಅಸೋಸಿಯೇಷನ್ ಆಫ್ ಇಂಡಿಯಾ ಅಧ್ಯಕ್ಷರಾದ ಪ್ರಶಾಂತ್ ಕುಮಾರ್ ಅವರು ಮಾತನಾಡಿ, ಎಐ ತಂತ್ರಜ್ಞಾನದಿಂದಾಗಿ ನ್ಯಾಯಾಲಯದ ತೀರ್ಪುಗಳನ್ನು ತ್ವರಿತವಾಗಿ ಸ್ಥಳೀಯ ಭಾಷೆಗಳಿಗೆ ಅನುವಾದ ಮಾಡುವುದು ಸಾಧ್ಯವಾಗುತ್ತಿದ್ದು, ಇದರಿಂದಾಗಿ ಸುಪ್ರೀಂ ಕೋರ್ಟಿನ ತೀರ್ಪುಗಳನ್ನು ಆಸಕ್ತಿಯಿರುವ ಹಳ್ಳಿಯ ಜನರೂ ಓದಬಹುದಾಗಿದೆ. ಇದು ವಕೀಲರಿಗೆ ತಮ್ಮ ಕಕ್ಷಿದಾರರೊಂದಿಗೆ ವ್ಯವಹರಿಸಲು ಅನುಕೂಲ ಕಲ್ಪಿಸಲಿದೆ ಎಂದು ಹೇಳಿದರು. ಭಾರತದ ನಿವೃತ್ತ ಮುಖ್ಯ ನ್ಯಾಯಮೂರ್ತಿ ಎಂ. ಎನ್. ವೆಂಕಟಾಚಲಯ್ಯ ಹಾಗೂ ಯುಐಎನ ಅಧ್ಯಕ್ಷರಾದ ಕೆ. ಕೆ. ವೇಣುಗೋಪಾಲ್ ಅವರ ಸಂದೇಶಗಳನ್ನು ವಿಡಿಯೋ ವ್ಯವಸ್ಥೆಯ ಮೂಲಕ ಬಿತ್ತರಿಸಲಾಯಿತು.

ಸುಪ್ರಿಂ ಕೋರ್ಟನ ವಿಶ್ರಾಂತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ, ಕರ್ನಾಟಕದ ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ ಶೆಟ್ಟಿ, ಯುಐಎ ಇಂಡಿಯಾ ಅಧ್ಯಕ್ಷರಾದ ಎ. ಕೆ. ಗಂಗೂಲಿ, ಹಿರಿಯ ವಕೀಲರಾದ ಕೃಷ್ಣನ್ ವೇಣುಗೋಪಾಲ್, ವಕೀಲೆ ಮತ್ತು ಯುಐಎ ಇಂಡಿಯಾ ಪ್ರಧಾನ ಕಾರ್ಯದರ್ಶಿ ಮಮತಾ ತಿವಾರಿ ಸೇರಿದಂತೆ ಮತ್ತಿತರ ಗಣ್ಯರು, ಹಿರಿಯ ವಕೀಲರು ಹಾಗೂ ಕಾನೂನು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ನೀರಿನ ಬಿಲ್ ಬಾಕಿದಾರರಿಗೆ ಜಲಮಂಡಳಿ ಯುಗಾದಿ ಗಿಫ್ಟ್

# ಮೂರು ತಿಂಗಳಲ್ಲಿ ಅಸಲು ಪಾವತಿಸಿದರೆ ಬಡ್ಡಿ ಮನ್ನಾ

**ಬೆಂಗಳೂರು,ಮಾ.21**–ಕುಡಿಯುವ ನೀರಿನ ಬಿಲ್ ಬಾಕಿ ಉಳಿಸಿಕೊಂಡಿರುವ ನಗರದ ಜನರಿಗೆ ಜಲಮಂಡಳಿಯು ಭರ್ಜರಿ ಆಫರ್ ನೀಡಿದೆ. ಏಪ್ರಿಲ್‌ನಿಂದ ಜೂನ್ ತಿಂಗ ಳ ಒಳಗೆ ಮೂರು ತಿಂಗಳ ಅವಧಿಯಲ್ಲಿ ಬಾಕಿ ಉಳಿಸಿಕೊಂಡ ನೀರಿನ ಬಿಲ್ ಅಸಲು ಪಾವತಿಸಿದರೆ, ಅದರ ಬಡ್ಡಿ ಮನ್ನಾ ಮಾಡಲಾ ಗುತ್ತದೆ ಎಂದು ಜಲಮಂಡಳಿ ಘೋಷಿಸಿದೆ.

ಈ ಆಫರ್ ನಾಗರಿಕರಿಗೆ ಜಲಮಂ ಡಳಿಯು ನೀಡಿದ ಯುಗಾದಿ ಉಡುಗೊರೆ ಯಾಗಿದೆ ಎಂದು ಬೆಂಗಳೂರು ಉಸ್ತುವಾರಿ ಸಚಿವರೂ ಆಗಿರುವ ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ತಮ್ಮ ಮಾ ಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ದೀರ್ಘಕಾಲದಿಂದ ನೀರಿನ ಬಿಲ್ ಬಾಕಿ ಉಳಿಸಿಕೊಂಡಿರುವ ಗ್ರಾಹಕರಿಗೆ ಅನುಕೂಲ ವಾಗಲು ಒನ್ ಟೈಮ್ ಸೆಟಲ್ಮೆಂಟ್ ಯೋಜನೆ ಯನ್ನು ಬರುವ ಏಪ್ರಿಲ್ ತಿಂಗಳಿನಿಂದ ಜಾರಿಗೊಳಿಸಲಾಗುತ್ತದೆ ಎಂದು ಡಿಸಿಎಂ ಮಾಹಿತಿ ನೀಡಿದ್ದಾರೆ.

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯಾಪ್ತಿಯಲ್ಲಿರುವ ಸುಮಾರು 11 ಲಕ್ಷ ನೀರಿನ ಸಂಪರ್ಕಗಳ ಪೈಕಿ, 5.11 ಲಕ್ಷ ಗ್ರಾಹಕರು ಕುಡಿಯುವ ನೀರಿನ ಬಿಲ್ ಬಾಕಿ ಉಳಿಸಿಕೊಂಡಿದ್ದಾರೆ. 2026ರ ಫೆಬ್ರವರಿ ತಿಂಗಳ ಅಂತ್ಯದವರೆಗಿನ ಮಾಹಿತಿಯಂತೆ, ಒಟ್ಟು ಬಾಕಿ ಮೊತ್ತ 851.33 ಕೋಟಿ ರೂ.ಗಳಾಗಿವೆ.

ಇದರಲ್ಲಿ ಅಸಲು ಮೊತ್ತ ರೂ. 539.43 ಕೋಟಿ ರೂ. ಹಾಗೂ ಬಡ್ಡಿ 311.90 ಕೋಟಿ ರೂ.ಸೇರಿದೆ. ನೀರಿನ ಬಿಲ್ ಕಟ್ಟದೇ ಬಾಕಿ ಉಳಿಸಿಕೊಂಡ ಜನರಿಗೆ ಅನುಕೂಲ ಮಾಡಿಕೊಡಲು ಬಿಲ್ ಅಸಲು ಪಾವತಿಸಿದಲ್ಲಿ ಒಟಿಎಸ ಯೋಜನೆಯಡಿ ಬಡ್ಡಿಯನ್ನು ಮನ್ನಾ ಮಾಡಲಾಗುವುದು ಎಂದು ಡಿಸಿಎಂ ಹೇಳಿದ್ದಾರೆ.

ಬಿಡಬ್ಲ್ಯೂಎಸ್‌ಎಸ್ಬಿ ಏಪ್ರಿಲ್‌ನಿಂದ ಜಾರಿಗೆ ತರಲಿರುವ ಒಟಿಎಸ್ ಯೋಜನೆಯ ಪ್ರಕಾರ, ನೀರಿನ ಬಿಲ್ ಮೇಲಿನ ಶೇ.100ರಷ್ಟು ಬಡ್ಡಿ ಮನ್ನಾ ಮಾಡಲಾಗುತ್ತದೆ. 3 ತಿಂಗಳು ಜಾರಿಯಲ್ಲಿರುವ ಯೋಜನೆ ಅವಧಿಯಲ್ಲಿ ಗ್ರಾಹಕರು ತಮ್ಮ ಅಸಲು ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಿದರೆ, ಏಪ್ರಿಲ್ 2026ರವರೆಗೆ ಸಂಗ್ರಹವಾಗಿರುವ ಸಂಪೂರ್ಣ ಬಡ್ಡಿಯನ್ನು




ರಿಬೇಟ್ ರೂಪದಲ್ಲಿ ಮನ್ನಾ ಮಾಡಲಾಗುತ್ತದೆ.

ಯಾರಿಗೆಲ್ಲಾ ಅನ್ವಯ?: ಈ ಯೋಜನೆಯು ಗೃಹ (ವಾಣಿಜ್ಯ ಕೈಗಾರಿಕಾ ಸೇರಿದಂತೆ ಜಲಮಂಡಳಿಯ ಎಲ್ಲ ವರ್ಗದ ಗ್ರಾಹಕರಿಗೂ ಅನ್ವಯವಾಗಲಿದೆ. ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳ ಬಾಕಿಗಳಿಗೂ ಲೆಕ್ಕಪತ್ರ ಸಮನ್ವಯದ ಮೂಲಕ ಬಡ್ಡಿ ಮನ್ನಾ ಯೋಜನೆಯ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಪಾವತಿ ಪ್ರಕ್ರಿಯೆ ಹೇಗೆ?: ಗ್ರಾಹಕರಿಗೆ ಮಾಹಿತಿ ಒದಗಿಸುವ ಹಾಗೂ ಪಾವತಿ ಪ್ರಕ್ರಿಯೆಯನ್ನು ಅತ್ಯಂತ ಸರಳಗೊಳಿಸುವ ನಿಟ್ಟಿನಲ್ಲಿ, ಬಿಡಬ್ಲ್ಯೂಎಸ್‌ಎಸ್ಬಿ ವತಿಯಿಂದ ಪ್ರತಿ ಬಾಕಿದಾರರಿಗೆ ಅವರ ಆರ್‌ಆರ್ ಸಂಖ್ಯೆ, ಅಸಲು ಮೊತ್ತ, ಮನ್ನಾ ಆಗುವ ಬಡ್ಡಿ ಮೊತ್ತ ಹಾಗೂ ಪಾವತಿಸಬೇಕಾದ ಅಂತಿಮ ಮೊತ್ತದ ವಿವರಗಳನ್ನು ಒದಗಿಸಲಾಗುವುದು. ಗ್ರಾಹಕರು ಬಿಡಬ್ಲ್ಯೂಎಸ್‌ಎಸ್ಬಿ ಕಿಯೋಸ್ಕ್, ಆನ್ಲೈನ್ ಪೋರ್ಟಲ್ ಹಾಗೂ ವಿವಿಧ ಡಿಜಿಟಲ್ ಪಾವತಿ ವಿಧಾನಗಳ ಮೂಲಕ ಸುಲಭವಾಗಿ ಹಣ ಪಾವತಿಸಬಹುದು.

ಬೆಂಗಳೂರು ಮಹಾನಗರದ 5.11 ಲಕ್ಷಕ್ಕೂ ಹೆಚ್ಚು ಗ್ರಾಹಕರಿಗೆ ಆರ್ಥಿಕ ನೆರವು ನೀಡುವ ಹಾಗೂ ಮಂಡಳಿಯ ಆರ್ಥಿಕ ಸ್ಥಿತಿಯನ್ನು ಬಲಪಡಿಸುವ ದ್ವಿಮುಖ ಉದ್ದೇಶದಿಂದ ಈ ಯುಗಾದಿ ಕೊಡುಗೆಯನ್ನು ಜಾರಿಗೊಳಿಸಲಾಗುತ್ತಿದೆ. ಬರೋಬ್ಬರಿ 311 ಕೋಟಿ ರೂ.ಗಳ ಬಡ್ಡಿ ಮನ್ನಾ ಮಾಡುವ ಮೂಲಕ ನಾಗರಿಕರ ಮೇಲಿನ ಆರ್ಥಿಕ ಹೊರೆಯನ್ನು ಗಣನೀಯವಾಗಿ ಇಳಿಸಲಾಗುತ್ತಿದೆ. ಸಾರ್ವಜನಿಕರು ಈ ಯೋಜನೆಯ ಸುವರ್ಣಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ.


# ತೆಂಕುತಿಟ್ಟು ಯಕ್ಷಗಾನ ಕಲಾವಿದ ಸೂರಿಕುಮೇರು ಗೋವಿಂದ ಭಟ್ಟ ನಿಧನ

**ಶಿವಮೊಗ್ಗ,ಮಾ.21**–ತೆಂಕುತಿಟ್ಟು ಯಕ್ಷಗಾನದ ಅಗ್ರಗಣ್ಯ ಕಲಾವಿದ ಸೂರಿಕುಮೇರು ಗೋವಿಂದ ಭಟ್ಟ (88) ಶುಕ್ರವಾರ ರಾತ್ರಿ ಶಿವಮೊಗ್ಗದ ತೀರ್ಥಹಳ್ಳಿಯ ಹೆದ್ದೂರಿನಲ್ಲಿ ನಿಧನರಾದರು.

ಅವರಿಗೆ ಮೂವರು ಪುತ್ರರು ಇದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ವಿಟ್ಲದ ಕನಿಲದಲ್ಲಿ ಜನಿಸಿದ ಗೋವಿಂದ ಭಟ್ಟರು ನಂತರ ಕಲ್ಲಡ್ಕ ಸಮೀಪದ ಸೂರಿಕುಮೇರುವಿನಲ್ಲಿ ವಾಸವಾಗಿದ್ದರು. ಈಚೆಗೆ ಕೆಲವು ವರ್ಷಗಳಿಂದ ತೀರ್ಥ ಹಳ್ಳಿಯ ಲ್ಲಿದ್ದರು.

ಪುತ್ರರಾದ ಪ್ರಸನ್ನ ಕುಮಾರ್ ಮತ್ತು ಶ್ಯಾಂ ಪ್ರಸಾದ್ ತೀರ್ಥಹಳ್ಳಿಯಲ್ಲಿದ್ದು, ಸೂರ್ಯ ಭಟ್ಟ ಸೂರಿಕುಮೇರುವಿನಲ್ಲಿ ನೆಲೆಸಿದ್ದಾರೆ.

ಏಳನೇ — 7ನೇ ತರಗತಿ ವರೆಗೆ ಓದಿದ್ದ ಗೋವಿಂದ ಭಟ್ಟರು 1951ರಲ್ಲಿ ಮೇಳಕ್ಕೆ



ಸೇರಿ ಕುರಿಯ ವಿಠಲ ಶಾಸ್ತ್ರಿ, ಪರಮಶಿವನ್, ಮಾಧವ ಮೆನನ್, ರಾಜನ್ ಅಯ್ಯರ್ ಅವರಲ್ಲಿ ನಾಟ್ಯ ಕಲಿತು ಧರ್ಮಸ್ಥಳ, ಮುಲ್ಕಿ, ಕೂಡ್ಲು, ಸುರತ್ಕಲ್ ಮತ್ತು ಇರಾ ಸೋಮನಾಥೇಶ್ವರ ಮೇಳಗಳಲ್ಲಿ ತಿರುಗಾಟ ನಡೆಸಿರುತ್ತಾರೆ. ಕೌರವ, ರಕ್ತಬೀಜ, ಇಂದ್ರಜಿತು ಮಾಗಧ, ಕರ್ಣ, ಅತಿಕಾಯ ನರಕಾಸುರ, ತಾಂಮ್ರಾಕ್ಷ ಕನಕಕಶಿಪು,

ದೇವೇಂದ್ರ, ಅರ್ಜುನ ಹನುಮಂತ, ಭೀಷ್ಮ ಬಾಹುಬಲಿ, ವಿಶ್ವಾಮಿತ್ರ ಅವರಿಗೆ ಹೆಸರು ತಂದು ಕೊಟ್ಟ ಪಾತ್ರಗಳು.ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪುರಸ್ಕಾರ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕನ್ನಡ ಸಾಹಿತ್ಯ ಪರಿಷತ್ತು ಪುರಸ್ಕಾರ, ಕರ್ನಾಟಕ ಜಾನಪದ ಅಕಾಡೆಮಿ ಸಾಧನಾ ಪ್ರಶಸ್ತಿಗೆ ಅವರು ಪಾತ್ರರಾಗಿದ್ದಾರೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L